ಸಂಪುಟ 01 | ಸಂಚಿಕೆ 119 | ಮಂಗಳವಾರ 17 ಮಾರ್ಚ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಅಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಸೇಂಟ್ ಪ್ಯಾಟ್ರಿಕ್ಸ್ ಡೇ**

ಸೇಂಟ್ ಪ್ಯಾಟ್ರಿಕ್ಸ್ ಡೇ ವಿಶ್ವಾದ್ಯಂತ ಆಚರಣೆಯನ್ನು ಪ್ರಾರಂಭಿಸುತ್ತದೆ, ಇದನ್ನು ಸೇಂಟ್ ಪ್ಯಾಟ್ರಿಕ್ ಫೀಸ್ಟ್ ಎಂದೂ ಕರೆಯಲಾಗುತ್ತದೆ. ಮಾರ್ಚ್ 17 ರಂದು, ಅನೇಕರು ಐರಿಶ್ ಗೌರವಾರ್ಥವಾಗಿ ಹಸಿರು ಧರಿಸುತ್ತಾರೆ ಮತ್ತು ಶ್ಯಾಮ್ರಾಕ್ಸ್‌ನಿಂದ ಅಲಂಕರಿಸುತ್ತಾರೆ. ದಂತಕಥೆಯ ಪ್ರಕಾರ, ಹಸಿರು ಸಂಪ್ರದಾಯವನ್ನು ಧರಿಸುವುದು 1726 ರಲ್ಲಿ ಸೇಂಟ್ ಪ್ಯಾಟ್ರಿಕ್ ಬಗ್ಗೆ ಬರೆದ ಕಥೆ

## ಸುಭಾಷಿತ


ತನ್ನ ನಿಂದನೆಯನ್ನು ಕೇಳಿದ ನಂತರವೂ ಶಾಂತವಾಗಿರುವ ವ್ಯಕ್ತಿ ಇಡೀ ಜಗತ್ತನ್ನೇ ಗೆಲ್ಲುತ್ತಾನೆ...

ಗೌತಮ ಬುದ್ಧ

## ಇಂದು ಜನಾಬ ಅಯ್ಯುಬ ಮನಿಯಾರ್ ರವರ ವತಿಯಿಂದ ಈದ್ ಕಿಟ್ ವಿತರಣಾ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ಜನಾಬ ಅಯ್ಯುಬ ಮದನ್ ಸಾಬ್ ಮನಿಯಾರ್ ರವರು ತಮ್ಮ ದಿವಂಗತ ತಂದೆ ತಾಯಿಯ ಸ್ಮರಣಾರ್ಥ ರಂಜಾನ್ ಹಬ್ಬದ ಪ್ರಯುಕ್ತ ನಗರದ ಬಡ ಕುಟುಂಬಗಳಿಗೆ ಈದ್ ಕಿಟ್ ಗಳನ್ನು ಇಂದು ಮಂಗಳವಾರ ದಿನಾಂಕ 17 ಮಾರ್ಚ್ 2026 ಸಮಯ ಬೆಳಗ್ಗೆ 10 ಗಂಟೆಗೆ.**



ನಗರದ ಹುಡುಕೋ ಕಾಲೋನಿಯಲ್ಲಿರುವ ತಮ್ಮ ನಿವಾಸದ ಮುಂದೆ ಈದ್ ಕಿಟ್ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮನಿಯಾರ್ ಚಾರಿಟೇಬಲ್ ಟ್ರಸ್ಟ್ ನ ಅಧ್ಯಕ್ಷರಾದ ಜನಾಬ ಅಯ್ಯುಬ ಮನಿಯಾರ ರವರು ಹೇಳಿದ್ದಾರೆ. ಈ ಕಾರ್ಯಕ್ರಮದಲ್ಲಿ ಆಲಮೇಲದ ಶ್ರೀ ಜಗದೇವ ಮಲ್ಲಿಬೊಮ್ಮ ಮಹಾಸ್ವಾಮಿಗಳು, ಶಾಸಕ ಸಿಎಸ್ ನಾಡಗೌಡ, ಉಪನ್ಯಾಸಕರಾದ ಶ್ರೀ ಲಾಲಹುಸೇನ ಕಂದಗಲ್, ತಹಸಿಲ್ದಾರ್ ಕೀರ್ತಿ ಚಾಲಕ್ , ಸಿ.ಪಿ.ಐ ಶ್ರೀ ಮೊಹಮ್ಮದ್ ಫಸಿಯುದ್ದೀನ್, ಶ್ರೀ ಬಾಬುಗೌಡ ಬಿರಾದಾರ, ಶ್ರೀ ಶಂಕರಗೌಡ ಹೊಸಮನಿ, ಶ್ರೀ ರೂಪಸಿಂಗ್ ಲೋಣಾರಿ, ಶ್ರೀಮತಿ ಸಂಗಮ್ಮ ದೇವರಹಳ್ಳಿ ಉಪಸ್ಥಿತರಿರಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ರಾಜ್ಯದ ಹಲವೆಡೆ ಅನಧಿಕೃತವಾಗಿ ಸಂಗಹಿಸಿದ್ದ LPG ಸಿಲಿಂಡರ್‌ಗಳ ವಶ

**ಹುಬ್ಬಳ್ಳಿ, ಮಾ.16–ಇಲ್ಲಿಯ ಸಿದ್ಧೇಶ್ವರ ಪಾರ್ಕ್‌ನ ಶಿವಸಾಗರ ಹೋಟೆಲ್‌ನಲ್ಲಿ ಅನಧಿಕೃತವಾಗಿ ಸಂಗ್ರಹಿಸಿಟ್ಟುಕೊಂಡಿದ್ದ ವಾಣಿಜ್ಯ ಬಳಕೆಯ ಅನಿಲದ ಸಿಲಿಂಡರ್‌ಗಳನ್ನು ಆಹಾರ ಇಲಾಖೆ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಪೊಲೀಸ್ ಸಹಕಾರದೊಂದಿಗೆ ತಡರಾತ್ರಿ ದಾಳಿ ನಡೆಸಿದ ಅಧಿಕಾರಿಗಳು, ಅನಿಲ ತುಂಬಿದ 25 ಸಿಲಿಂಡರ್‌ಗಳನ್ನು ಪತ್ತೆ ಹಚ್ಚಿ ವಿದ್ಯಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.**

ಅಗತ್ಯ ವಸ್ತುಗಳ ಅಕ್ರಮ ದಾಸ್ತಾನು ಕಾಯ್ದೆಯಡಿ ಹೋಟೆಲ್ ಸಹ ಮಾಲೀಕ ಸತೀಶ ಬಂಡಿ ವಿರುದ್ಧ ಆಹಾರ ನಿರೀಕ್ಷಕ ವಿಜಯಕುಮಾರ ಪತ್ತಾರ ದೂರು ನೀಡಿದ್ದಾರೆ. ಗೋ ಗ್ಯಾಸ್ ಕಂಪನಿಯಿಂದ ಪೂರೈಕೆಯಾಗುವ ಅನಿಲದ ಸಿಲಿಂಡರ್‌ಗಳನ್ನು ಹೋಟೆಲ್‌ನಲ್ಲಿ ಹೆಚ್ಚುವರಿಯಾಗಿ ದಾಸ್ತಾನು ಮಾಡಲಾಗಿತ್ತು. ಎಲ್ಲಿಂದ ಪೂರೈಕೆಯಾಗಿದೆ ಎನ್ನುವ ಕುರಿತು ತನಿಖೆ ನಡೆಯುತ್ತಿದೆ ಎಂದು ಜಿಲ್ಲಾ




ಆಹಾರ ಮತ್ತು ನಾಗರಿಕ ಸರಬರಾರು ಇಲಾಖೆ ವಿಜಯಕುಮಾರ ಹೆಗ್ಗಳಗಿ ತಿಳಿಸಿದರು.

45 ಸಿಲಿಂಡರ್‌ಗಳು ಜಪ್ತಿ : ಗ್ಯಾಸ್ ಏಜೆನ್ಸಿ ಮಳಿಗೆಯೊಂದರಲ್ಲಿ ಅಕ್ರಮವಾಗಿ ದಾಸ್ತಾನು ಮಾಡಿದ್ದ ಖಾಸಗಿ ಕಂಪನಿಯ 45 ಸಿಲಿಂಡರ್‌ಗಳನ್ನು ಪೀಣ್ಯಾ ಠಾಣೆ ಪೊಲೀಸರು ಜಪ್ತಿ ಮಾಡಿದ್ದಾರೆ.

ಬೆಂಗಳೂರು ಉತ್ತರ ತಾಲ್ಲೂಕು ಆಹಾರ ನಿರೀಕ್ಷರಾದ ಪ್ರಸನ್ನ ಕುಮಾರ್ ಅವರಿಗೆ ದೊರೆತ ಖಚಿತ ಮಾಹಿತಿ ಮೇರೆಗೆ ಅಧಿಕಾರಿಗಳಾದ ರಾಮಾಚಾರ್ ಮತ್ತು ಶಮಂತ್ ಅವರೊಂದಿಗೆ ಚೊಕ್ಕಸಂದ್ರ ಮುಖ್ಯ ರಸ್ತೆಯಲ್ಲಿರುವ ಶ್ರೀ ವಿನಾಯಕ ಗ್ಯಾಸ್ ಏಜೆನ್ಸಿ ಮಳಿಗೆ ಮೇಲೆ ದಾಳಿ ಮಾಡಿದಾಗ ಮಳಿಗೆಯಲ್ಲಿ ಯಾವುದೇ ಅಧಿಕೃತ ಪರವಾನಗಿ ಇಲ್ಲದೇ ಅಕ್ರಮವಾಗಿ ದಾಸ್ತಾನು ಮಾಡಿದ 45 ಸಿಲಿಂಡರ್‌ಗಳು ಕಂಡು ಬಂದಿವೆ.City & Local Guides ಗ್ಯಾಸ್ ವಿತರಣೆಗೆ ಸಂಬಂಧಿಸಿದ ಅಧಿಕೃತ ಡೀಲರ್‌ಶಿಪ್ ದಾಖಲೆಗಳು, ಬಿಲ್‌ಗಳನ್ನು ಮಳಿಗೆಯಲ್ಲಿದ್ದ ಜನಾರ್ದನ್ ಎಂಬುವವರು ಅಧಿಕಾರಿಗಳ ಮುಂದೆ ಹಾಜರು ಪಡಿಸಲು ವಿಫಲರಾಗಿದ್ದಾರೆ.

ಅಲ್ಲದೇ ಜನನಿಬಿಡ ಪ್ರದೇಶದಲ್ಲಿ ಯಾವುದೇ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳದೆ ಅನಿಲ ಸಿಲಿಂಡರ್‌ಗಳನ್ನು ಅಕ್ರಮವಾಗಿ ದಾಸ್ತಾನು ಮಾಡಿರುವುದು ಕಂಡು ಬಂದ ಹಿನ್ನಲೆಯಲ್ಲಿ ಪೀಣ್ಯಾ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಎಎಸ್‌ಐ ವೆಂಕಟೇಶ್ ಅವರು, ಸಿಬ್ಬಂದಿಯೊಂದಿಗೆ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ, 45 ಗ್ಯಾಸ್ ಸಿಲಿಂಡರ್‌ಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ.ಮಳಿಗೆಯ ಮಾಲೀಕರ ವಿರುದ್ಧ ಎಫ್‌ಐಆರ್ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ರಂಜಾನ್ ಹಬ್ಬದ ಅಂಗವಾಗಿ ಇಫ್ತಿಯಾರ್ ಕೂಟ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಈದ್ಗಾ ಶಾದಿ ಮಹಲ್ ಸಭಾಂಗಣದಲ್ಲಿ ರಂಜಾನ್ ಹಬ್ಬದ ಅಂಗವಾಗಿ ತಾಲೂಕಿನ ಮುಸ್ಲಿಂ ಬಾಂಧವರಿಗಾಗಿ ಆಯೋಜಿಸಲಾದ ಇಫ್ತಿಯಾರ್ ಕೂಟದಲ್ಲಿ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ–ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಮಾತನಾಡಿ, ಪವಿತ್ರ ರಂಜಾನ್ ಮಾಸದಲ್ಲಿ ಮುಸ್ಲಿಂ ಸಮುದಾಯದವರು 30 ದಿನಗಳ ಕಾಲ ರೋಜಾ ಉಪವಾಸ ಆಚರಿಸಿ ಭಕ್ತಿಯಿಂದ ಹಬ್ಬವನ್ನು ಆಚರಿಸುತ್ತಾರೆ.**

ಈ ಸಂದರ್ಭದಲ್ಲಿ ವಿವಿಧ ಸಮುದಾಯದವರು ಸೇರಿ ಇಫ್ತಿಯಾರ್ ಕೂಟಗಳನ್ನು ಆಯೋಜಿಸುವ ಮೂಲಕ ರಂಜಾನ್ ಹಬ್ಬವನ್ನು



ಆಚರಿಸುವುದು ಶಾಂತಿ ಹಾಗೂ ಸೌಹಾರ್ದತೆಯ ಸಂದೇಶವನ್ನು ನೀಡುತ್ತದೆ ಎಂದು ಹೇಳಿದರು. ಶಾಸಕ ಹಂಪಯ್ಯನಾಯಕ ಮಾತನಾಡಿ, ಹಲವು ವರ್ಷಗಳಿಂದ ಹಿಂದೂ ಹಾಗೂ ಮುಸ್ಲಿಂ ಸಮುದಾಯದವರು ಸೇರಿ ರಂಜಾನ್ ಹಬ್ಬದ ಅಂಗವಾಗಿ ಇಫ್ತಿಯಾರ್ ಕೂಟಗಳನ್ನು ಸೌಹಾರ್ದಯುತವಾಗಿ ಆಯೋಜಿಸಿಕೊಂಡು ಬರುತ್ತಿರುವುದು ಸಮಾಜದಲ್ಲಿ ಸಹೋದರತ್ವವನ್ನು ಬಲಪಡಿಸುವ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಮುಸ್ಲಿಂ ಧರ್ಮಗುರು ಸೈಯಾದ್ ಜೀಶನ್ ಹಸನ್ ಖಾದ್ರಿ ಮುಫ್ತಿ ರಂಜಾನ್ ಹಬ್ಬದ ಸಂದೇಶ ನೀಡಿ, ರೋಜಾ ಉಪವಾಸ ಆಚರಿಸುವ ಮುಸ್ಲಿಂ ಧರ್ಮಿಯರಿಗೆ ಹಿಂದೂ ಸಮುದಾಯದವರು ಇಫ್ತಿಯಾರ್ ಕೂಟ ಆಯೋಜಿಸುವುದು ಹಿಂದೂ–ಮುಸ್ಲಿಂ ಏಕತೆ, ಶಾಂತಿ, ಪ್ರೇಮ ಹಾಗೂ ಸೌಹಾರ್ದತೆಯ ಸಂಕೇತವಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪಟ್ಟಣದ ಸಾವಿರಾರು ಮುಸ್ಲಿಂ ಬಾಂಧವರಿಗೆ ಇಫ್ತಿಯಾರ್ ಭೋಜನವನ್ನು ವಿತರಿಸಲಾಯಿತು. ರಾಜ್ಯ ಕಾಂಗ್ರೆಸ್ ಯುವ ಮುಖಂಡ ರವಿಭೋಸರಾಜು, ಮಹಮ್ಮದ್ ಶಾಲಂ, ಆರ್.ಎ.ಪಿ.ಸಿ.ಎಂ.ಎಸ್. ಅಧ್ಯಕ್ಷ ಪತಂಗೆ ಜಯಂತರಾವ್, ನಯೋಪ್ರ ಅಧ್ಯಕ್ಷ ಅಬ್ದುಲ್ ಗಾಫೂರ್ ಸಾಬ್, ಶೇಖ ಫರೀದ್ ಉಮ್ರಿ, ಶಾಂತಪ್ಪ, ಸೈಯಾದ್ ಅಕ್ಬರ್ ಪಾಷಾ, ಜಮಾತ್ ಇಸ್ಲಾಂ ಹಿಂದ್ ತಾಲೂಕು ಅಧ್ಯಕ್ಷ ಅಬ್ದುಲ್ ರೆಹಮಾನ್ ಸಾಬ್, ಮುಜಾಹಿದಿನ್ ಇಸ್ಲಾಂ, ಮೌಲಾನ ಜೀಶಾನ್, ಶರಣಯ್ಯ ಕೆ.ಗುಡದಿನ್ನಿ, ಬಿ.ಕೆ.ಅಂಬರೇಶಪ್ಪ ಸೇರಿದಂತೆ ಹಿಂದೂ ಮತ್ತು ಮುಸ್ಲಿಂ ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಕರವೇ ಶಿವರಾಮೇಗೌಡ ಬಣದಿಂದ ಕುಡಿಯುವ ನೀರಿನ ಅರವಟ್ಟಿಗೆ ಸ್ಥಾಪನೆ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಬೇಸಿಗೆ ಕಾಲದ ತೀವ್ರ ಬಿಸಿಲಿನ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ನೆರವಾಗುವ ಉದ್ದೇಶದಿಂದ ಕರ್ನಾಟಕ ರಕ್ಷಣಾ ವೇದಿಕೆ ಎಚ್. ಶಿವರಾಮೇಗೌಡ ಬಣ ಕನ್ನಡ ಪರ ಸಂಘಟನೆಗಳ ಒಕ್ಕೂಟ ತಾಲೂಕು ಘಟಕ ಮಾನ್ವಿ ವತಿಯಿಂದ ಕುಡಿಯುವ ನೀರಿನ ಅರವಟ್ಟಿಗೆ ಸ್ಥಾಪಿಸಲಾಯಿತು.**

ಈ ವೇಳೆ ಮಾತನಾಡಿದ ತಾಲೂಕು ಅಧ್ಯಕ್ಷ ನರಸಿಂಹ ಎನ್.ಹೆಚ್.ಪಿ., ಬೇಸಿಗೆ ಅವಧಿಯಲ್ಲಿ ಸಾರ್ವಜನಿಕರಿಗೆ ತಂಪು ನೀಡುವ ಉದ್ದೇಶದಿಂದ ವಾರದಲ್ಲಿ ಒಂದು ದಿನ ಮಜ್ಜಿಗೆ ವಿತರಣೆ ಕಾರ್ಯಕ್ರಮವೂ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಈ ಕಾರ್ಯಕ್ರಮವನ್ನು ಉದ್ಘಾಟಿಸಿದ ಮಾನ್ವಿ ಪಿಐ ಸೋಮಶೇಖರ್ ಕೆಂಚರೆಡ್ಡಿ ಮತ್ತು ಇಂಡಿಯನ್ ಪೆಟ್ರೋಲ್ ಬಂಕ್ ಮಾಲಕರಾದ ಸಂತೋಷ್ ಕುಮಾರ್ ಜೈನ್




ಸಮಾಜದಲ್ಲಿ ಸಾರ್ವಜನಿಕ ಸೇವೆ ಅತ್ಯಂತ ಮಹತ್ತರ ಕಾರ್ಯವಾಗಿದ್ದು, ಈ ರೀತಿಯ ಸೇವಾ ಕಾರ್ಯಕ್ರಮಗಳು ನಿರಂತರವಾಗಿ ನಡೆಯಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮಕ್ಕೆ ಆಗಮಿಸಿದ ಗಣ್ಯರನ್ನು ಕನ್ನಡ ಶಾಲು ಹೊದಿಸಿ ಸನ್ಮಾನಿಸಲಾಯಿತು. ಕಾರ್ಯಕ್ರಮಕ್ಕೆ ನಗರ ಘಟಕ ಗೌರವ ಅಧ್ಯಕ್ಷ ಶಾಂತಕುಮಾರ್ ಸ್ವಾಗತ ಕೋರಿದರು. ಈ ಸಂದರ್ಭದಲ್ಲಿ ಕರವೇ ತಾಲೂಕು ಗೌರವಾಧ್ಯಕ್ಷ ಎಲ್ಲಪ್ಪ ನೆಲಗಲ್, ವಿ.ಎಸ್. ಎಚ್.ಪಿ ವಿಜಯಕುಮಾರ್, ಇಬ್ರಾಂಪುರ್ ಬಸನಗೌಡ ಆಲ್ದಾಳ, ಚೇತನ್ ಕುಮಾರ್, ಚಂದ್ರ ಮುದ್ಲಾಪುರ್, ರವಿ ಮದ್ಲಾಪುರ್, ಶಿವಕುಮಾರ್, ಆನಂದ್ ಸ್ವಾಮಿ, ಅನಿಲ್ ಕುಮಾರ್, ವಿನಯ ಕುಮಾರ್ ಬಿ.ಎಂ., ಸನಂತ್ ಕುಮಾರ್, ಹರೀಶ್ ಕಾತ್ರಿಕಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಆಪ್ತ ಸಚಿವರಿಗೆ ಸಿದ್ದರಾಮಯ್ಯ ಇಂದು ಡಿನ್ನರ್ ಪಾರ್ಟಿ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಕಾಂಗ್ರೆಸ್‌ನಲ್ಲಿ ಡಿನ್ನರ್ ಪಾಲಿಟಿಕ್ಸ್ ಮುಗಿಯುವ ಲಕ್ಷಣ ಕಾಣುತ್ತಿಲ್ಲ. ಡಿಸಿಎಂ ಡಿ.ಕೆ.ಶಿವಕುಮಾರ್ ಬಳಿಕ ಈಗ ಸಿಎಂ ಸಿದ್ದರಾಮಯ್ಯ ಆಪ್ತ ಸಚಿವರಿಗೆ ಡಿನ್ನರ್ ಪಾರ್ಟಿ ಕೊಡುತ್ತಿರುವುದು ಕುತೂಹಲಹಕ್ಕೆ ಕಾರಣವಾಗಿದೆ.**

ಕಾಂಗ್ರೆಸ್‌ನಲ್ಲಿ ಕುರ್ಚಿ ಕಿತ್ತಾಟವು ನಿಲ್ಲುತ್ತಿಲ್ಲ. ಡಿನ್ನರ್ ಪಾರ್ಟಿ ಪ್ರಹಸನವೂ ಮುಗಿಯುತ್ತಿಲ್ಲ. ಕೆಪಿಸಿಸಿ ಅಧ್ಯಕ್ಷರಾಗಿ 6 ವರ್ಷ ಪೂರೈಸಿದ ಸಂಭ್ರಮದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಡಿನ್ನರ್ ಪಾರ್ಟಿ ಕೊಟ್ಟರೆ, ಅದಕ್ಕೆ ಕೌಂಟರ್ ಎಂಬಂತೆ ಸಿಎಂ ಸಿದ್ದರಾಮಯ್ಯ ಇಂದು ಆಪ್ತ ಸಚಿವರಿಗೆ ಡಿನ್ನರ್ ಆಯೋಜನೆ ಮಾಡಿದ್ದಾರೆ. ಕಾವೇರಿ ನಿವಾಸದಲ್ಲಿ ರಾತ್ರಿ



ಆಪ್ತ ಸಚಿವರಿಗೆ ಡಿನ್ನರ್ ಇಟ್ಟಿಕೊಂಡಿದ್ದು, ಸಿಎಂ ನಡೆ ಕುತೂಹಲ ಮೂಡಿಸಿದೆ.

‘ಕೈ’ ಪಾಳಯದಲ್ಲಿ ಕುರ್ಚಿ ವಾರ್ ಜೋರಾಗಿ ನಡೆಯುತ್ತಿದೆ. ಒಂದುಕಡೆ ಡಿ.ಕೆ.ಶಿವಕುಮಾರ್ ಟೀಂ ಸಭೆ ಮಾಡಿ, ಸಿದ್ದು ಟೀಂಗೆ ಸಂದೇಶ ಕೊಡುವ ಪ್ರಯತ್ನ ಮಾಡುತ್ತಿದ್ದಾರೆ. ಮತ್ತೊಂದು ಕಡೆ ಸಿದ್ದರಾಮಯ್ಯ ಟೀಂ ಕೂಡಾ ತೆರೆಮರೆಯಲ್ಲಿ ಗೇಮ್ ಶುರು ಮಾಡಿದೆ. ಇದರ ಮಧ್ಯೆ ಸಿಎಂ ಡಿನ್ನರ್ ಪಾರ್ಟಿ ಕುತೂಹಲ ಮೂಡಿಸಿದೆ. ಆಪ್ತ ಸಚಿವರ ಜೊತೆ ಸಭೆ ಮಾಡಿ ಕುರ್ಚಿ ಕದನಕ್ಕೆ ಏನಾದ್ರು ಟ್ವಿಸ್ಟ್ ಕೊಡ್ತಾರಾ ಸಿಎಂ ಎಂದು ಕಾದು ನೋಡಬೇಕಿದೆ. ಪಂಚರಾಜ್ಯ ಚುನಾವಣೆ, ಜಿಬಿಎ ಚುನಾವಣೆ ಹಿನ್ನೆಲೆಯಲ್ಲಿ ಸದ್ಯಕ್ಕೆ ಸಿದ್ದರಾಮಯ್ಯ ಸೇಫ್ ಆಗಬಹುದು.

ಅದಾದ ಬಳಿಕ ಏನು ಎಂಬ ಚರ್ಚೆಗಳು ಇವತ್ತಿನ ಡಿನ್ನರ್ ಮೀಟಿಂಗ್‌ನಲ್ಲಿ ಆಗಬಹುದು. ಎಂತಹದ್ದೇ ಸಂದರ್ಭ ಬಂದರೂ ತಮ್ಮ ಜೊತೆ ನಿಲ್ಲಿ ಎಂಬ ಸಂದೇಶವನ್ನು ಸಿಎಂ ಆಪ್ತ ಸಚಿವರಿಗೆ ರವಾನೆ ಮಾಡಬಹುದು. ಸಿಎಂ ಡಿನ್ನರ್ ಮೀಟಿಂಗ್ ಬಳಿಕ ಹೊಸ ರಾಜಕೀಯ ಬೆಳವಣಿಗಳು ಆಗುತ್ತಾ ಎಂಬುದು ಸದ್ಯದ ಕುತೂಹಲ.

# ಪುಂಡಲೀಕ. ಮುರಾಳ ಅವರಿಗೆ ರಾಜ್ಯ ಮಟ್ಟದ ಮಹಾಂತಶ್ರೀ ಪ್ರಶಸ್ತಿ

❑ ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ಮಾತೋಶ್ರೀ ಮಹಾಂತಮ್ಮ ಶಿವಬಸಪ್ಪ ಗೋನಾಳ ಪ್ರತಿಷ್ಠಾನ (ರಿ.) ರಾಯಚೂರು ಹಾಗೂ ಪ್ರತಿಭಾ ಸುಗಮ ಸಂಗೀತ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ಹದಿನಾರನೇ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ್ದ ರಾಜ್ಯ ಮಟ್ಟದ ಮಹಾಂತಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಜಾನಪದ ಸಂಭ್ರಮ?2026 ಕಾರ್ಯಕ್ರಮ ರಾಯಚೂರಿನ ಸಿದ್ದರಾಮ ಜಮ್ಮಲದಿನ್ನಿ ಕಲ್ಯಾಣ ಮಂಟಪದಲ್ಲಿ ಅದ್ದೂರಿಯಾಗಿ ನಡೆಯಿತು.**

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷರು ಹಾಗೂ ಧರ್ಮಯುದ್ಧ ದಿನಪತ್ರಿಕೆಯ ಸಂಪಾದಕರಾದ ಪುಂಡಲೀಕ ಯ. ಮುರಾಳ ಅವರಿಗೆ ರಾಜ್ಯ ಮಟ್ಟದ ಮಹಾಂತಶ್ರೀ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು. ಕರ್ನಾಟಕ ಸರ್ಕಾರದ ಸಣ್ಣ




ನಿರಾವರಿ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಎಸ್. ಬೋಸರಾಜ್ ಅವರು ಪ್ರಶಸ್ತಿ ನೀಡಿ ಸನ್ಮಾನಿಸಿದರು. ಕಾರ್ಯಕ್ರಮದಲ್ಲಿ ಜಾನಪದ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಿತು. ಜಾನಪದ ಹಾಡು, ವಚನ ನೃತ್ಯ, ಭರತನಾಟ್ಯ ಹಾಗೂ ಸಂಗೀತ ಕಾರ್ಯಕ್ರಮಗಳು ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸಿತು. ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ್ದ ಕಲಾವಿದರು ತಮ್ಮ ಕಲೆಗಳ ಪ್ರದರ್ಶನದ ಮೂಲಕ ಕನ್ನಡ ಸಂಸ್ಕೃತಿ ಮತ್ತು ಜಾನಪದ ಪರಂಪರೆಯ ಮಹತ್ವವನ್ನು ಪ್ರತಿಪಾದಿಸಿದರು.

ಈ ಸಂದರ್ಭದಲ್ಲಿ ಹಿರಿಯ ನಿವೃತ್ತ ಐಎಎಸ್ ಅಧಿಕಾರಿ ಡಾ. ಸಿ. ಸೋಮಶೇಖರ್, ರಾಜ್ಯ ಕನ್ನಡ ಜಾನಪದ ಪರಿಷತ್ತಿನ ರಾಜ್ಯಾಧ್ಯಕ್ಷ ಡಾ. ಜನಪದ ಎಸ್. ಬಾಲಾಜಿ, ಅಂತರಾಷ್ಟ್ರೀಯ ಮಟ್ಟದ ಜಾನಪದ ಕಲಾವಿದ ಅಪ್ಪಿಗೆರೆ ತಿಮ್ಮರಾಜು, ಡಾ. ಶರಣಪ್ಪ ಗೋನಾಳ, ರಾಜ್ಯ ಮಾಹಿತಿ ಆಯೋಗದ ಆಯುಕ್ತ ಬಿ. ವೆಂಕಟ್ ಸಿಂಗ್, ಬೆಂಗಳೂರು ಗ್ರಾಮಾಂತರ ಕನ್ನಡ ಜಾನಪದ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಸಿ. ಕಾಂತಪ್ಪ ಸೇರಿದಂತೆ ಹಲವಾರು ಸಾಹಿತಿಗಳು, ಜಾನಪದ ಕಲಾವಿದರು, ಗಣ್ಯರು ಹಾಗೂ ರಾಜಕೀಯ ಮುಖಂಡರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಮಾತನಾಡಿದ ಗಣ್ಯರು, ಜಾನಪದ ಕಲೆಗಳು ನಾಡಿನ ಸಂಸ್ಕೃತಿ, ಪರಂಪರೆ ಹಾಗೂ ಜೀವನ ಮೌಲ್ಯಗಳನ್ನು ಪ್ರತಿಬಿಂಬಿಸುವ ಅಮೂಲ್ಯ ಸಂಪತ್ತಾಗಿದ್ದು, ಇಂತಹ ಕಾರ್ಯಕ್ರಮಗಳು ಕಲಾವಿದರಿಗೆ ಉತ್ತೇಜನ ನೀಡುವ ಜೊತೆಗೆ ಯುವ ಪೀಳಿಗೆಗೆ ಜಾನಪದ ಪರಂಪರೆಯ ಮಹತ್ವವನ್ನು ಪರಿಚಯಿಸುತ್ತವೆ ಎಂದು ಹೇಳಿದರು. ಪ್ರಶಸ್ತಿ ಸ್ವೀಕರಿಸಿದ ಪುಂಡಲೀಕ ಯ. ಮುರಾಳ ಅವರು ಮಾತನಾಡಿ, ಈ ಗೌರವವು ತಮ್ಮ ವೈಯಕ್ತಿಕ ಸಾಧನೆಯಷ್ಟೇ ಅಲ್ಲದೆ ಸಮಾಜ ಸೇವೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿರುವ ಎಲ್ಲರಿಗೂ ದೊರೆತ ಮಾನ್ಯತೆಯಾಗಿದೆ ಎಂದು ಹೇಳಿದರು. ಮುಂದೆಯೂ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿ ಕನ್ನಡ ಸಂಸ್ಕೃತಿ ಹಾಗೂ ಯುವಜನರ ಅಭಿವೃದ್ಧಿಗೆ ಸೇವೆ ಸಲ್ಲಿಸುವುದಾಗಿ ತಿಳಿಸಿದರು. ಸಮಾರಂಭದ ಅಂತ್ಯದಲ್ಲಿ ಗಣ್ಯರನ್ನು ಸನ್ಮಾನಿಸಿ, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಜಾನಪದ ಸಂಭ್ರಮವನ್ನು ಅದ್ದೂರಿಯಾಗಿ ಆಚರಿಸಲಾಯಿತು.

## ಸಾಹಿತ್ಯ ಸಿಂಚನ

ಮನಸ್ಸು

ಮನಸ್ಸು ಒಂದು ಸಮುದ್ರದಂತೆ
ಅಲೆಗಳೆಲ್ಲ ಭಾವನೆಗಳಂತೆ?
ಒಮ್ಮೆ ಸಂತೋಷದ ತೀರ ತಲುಪುತ್ತದೆ,
ಒಮ್ಮೆ ದುಃಖದ ಅಲೆಗಳಲ್ಲಿ ಮುಳುಗುತ್ತದೆ.

ಮನಸ್ಸು ಒಂದು ಕನ್ನಡಿ ಹಾಗೆ,
ನಾವು ಹೇಗಿದ್ದೇವೋ ಅದನ್ನೇ ತೋರಿಸುತ್ತದೆ?
ಒಳ್ಳೆಯ ಚಿಂತನೆ ತುಂಬಿದರೆ
ಜೀವನವೆಲ್ಲ ಬೆಳಕಾಗುತ್ತದೆ.

ಮನಸ್ಸು ಒಂದು ಹಕ್ಕಿಯಂತೆ,
ಕನಸುಗಳ ಆಕಾಶದಲ್ಲಿ ಹಾರುತ್ತದೆ?
ಆಶೆಯ ಗಾಳಿ ಸಿಕ್ಕಾಗ
ಸಂತೋಷದ ಲೋಕ ತಲುಪುತ್ತದೆ.

ಮನಸ್ಸನ್ನು ಶುದ್ಧವಾಗಿಟ್ಟರೆ
ಜೀವನ ಸುಂದರವಾಗುತ್ತದೆ?
ಒಳ್ಳೆಯ ಮನಸ್ಸು ಇದ್ದವನಿಗೆ
ಜಗವೇ ಸ್ನೇಹಿತವಾಗುತ್ತದೆ.

**ಅಮರೇಶ್**

## ಇಂದು (ಮಾ.17) ಅಕ್ಕಿ ಫೌಂಡೇಶನದಿಂದ ಇಫ್ತಾರ ಕೂಟ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪವಿತ್ರ ರಮಜಾನ ಮಾಸದ ಅಂಗವಾಗಿ ಅಕ್ಕಿ ಫೌಂಡೇಶನ್ ಅಭಿಮಾನಿ ಬಳಗದ ವತಿಯಿಂದ ಮುಸ್ಲಿಂ ಬಾಂಧವ-ರಿಗಾಗಿ ಇಂದು (ಮಾ.17) ಮಂಗಳವಾರ ಸೌಹಾರ್ದ ಇಫ್ತಾರ ಕೂಟವನ್ನು ತಾಲೂಕಿನ ಬಾವೂರ ಗ್ರಾಮದಲ್ಲಿ ಆಯೋಜಿಸಲಾಗಿದೆ.**



ಬಾವೂರ ಗ್ರಾಮದ ಜಾಮಿಯಾ ಮಸೀದಿಯಲ್ಲಿ ಸಂಜೆ 5-30ಕ್ಕೆ ನಡೆಯಲಿರುವ ಈ ಸೌಹಾರ್ದ ಇಫ್ತಾರ ಕೂಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಫೌಂಡೇಶನ್ ಅಧ್ಯಕ್ಷ, ಕಾಂಗ್ರೆಸ್ ಮುಖಂಡ ಸಿ.ಬಿ.ಅಕ್ಕಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿರೇಬಾಗೇವಾಡಿ ಬಳಿ ಈರುಳ್ಳಿ ತುಂಬಿದ್ದ ಲಾರಿ ಪಲ್ಟಿ: ಓರ್ವ ಸಾವು, ಇಬ್ಬರಿಗೆ ಗಂಭೀರ ಗಾಯ

❑ ನೈಜ್ಯ ದೆಸೆ ನ್ಯೂಸ್

**ಬೆಳಗಾವಿ: ಜಿಲ್ಲೆಯ ಹಿರೇಬಾಗೇವಾಡಿ ಬಳಿಯಲ್ಲಿ ಬೆಳಗಿನ ಜಾವ ಚಾಲಕನ ನಿಯಂತ್ರಣ ತಪ್ಪಿ ಈರುಳ್ಳಿ ತುಂಬಿದ್ದ ಲಾರಿ ಪಲ್ಟಿಯಾಗಿರುವ ಅವಘಡ ನಡೆದಿದೆ. ಲಾರಿ ಪಲ್ಟಿಯಾದ ಪರಿಣಾಮ ಸ್ಥಳದಲ್ಲಿಯೇ ಓರ್ವ ಸಾವನ್ನಪ್ಪಿದ್ದಾರೆ. ಇನ್ನಿಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ.**



ಮೃತನ ಗುರುತು ಪತ್ತೆಯಾಗಿಲ್ಲ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಇಂದು ನಸುಕಿನ ಜಾವ 1 ಗಂಟೆ ಸುಮಾರಿಗೆ ಈ ಅಪಘಾತ ಸಂಭವಿಸಿದೆ. ಘಾಟ್ ನಲ್ಲಿ ಅದಾಗಲೇ ಮೂರು ಲಾರಿ ಗಳು ಪಲ್ಟಿಯಾಗಿ ಬಿದ್ದಿದ್ದವು. ವಾಹನ ಸಂಚಾರಕ್ಕೂ ಅಡ್ಡಿಯುಂಟಾಗುತ್ತಿತ್ತು. ಘಟನ ಅಸ್ಥಳಕ್ಕೆ ಆಗಮಿಸಿದ ಬೆಳಗಾವಿ ಪೊಲೀಸರು ವಾಹನಗಳನ್ನು ತೆರವುಗೊಳಿಸಿ, ರಾಷ್ಟ್ರೀಯ ಹೆದ್ದಾರಿ ಸಿಬ್ಬಂದಿಗಳ ಜೊತೆ ಸೇರಿ ರಸ್ತೆಯನ್ನು ಗುಡಿಸಿ, ಸಂಭವಿಸಲಿದ್ದ ಇನ್ನಷ್ಟು ಅಪಘಾತಗಳನ್ನು ತಡೆದಿದ್ದಾರೆ.

# ಮನುಕುಲದ ಉದ್ದಾರಕ್ಕಾಗಿ ಮಠಗಳನ್ನು ಕಟ್ಟಿ, ಭಾವೈಕ್ಯತೆಗೆ ಅಡಿಪಾಯ ಹಾಕಿದವರು ರೇಣುಕಾಚಾರ್ಯರು: ಮುರುಗೇಂದ್ರ ಶ್ರೀ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಮಾ.17 ವಿವಿಧ ಸಮುದಾಯಗಳ ಮಠಗಳನ್ನು ಸ್ಥಾಪಿಸಿ ಸರ್ವರಿಗೂ ಧಾರ್ಮಿಕ ಸ್ವಾತಂತ್ರ್ಯವನ್ನು ದೊರಕಿಸಿಕೊಟ್ಟು ಮನುಕುಲದ ಉದ್ದಾರಕ್ಕಾಗಿ 18 ಮಠಗ ಳನ್ನು ಕಟ್ಟಿ ಭಾವೈಕ್ಯತೆಗೆ ಅಡಿಪಾಯ ಹಾಕಿದವರು ಶ್ರೀ ಜಗದ್ಗುರು ರೇಣುಕಾ ಚಾರ್ಯರು ಎಂದು ಶ್ರೀ ಮುರುಗೇಂದ್ರ ಶಿವಯೋಗಿಗಳು ಸಿದ್ದರಾಮೇಶ್ವರ ಗುರುಮಠ ಯರಡೋಣ ಇವರು ಹೇಳಿದರು.**

ಅವರಿಂದು ಪಟ್ಟಣದ ಈಶ್ವರ ದೇವಸ್ಥಾ ನದಲ್ಲಿ ಶ್ರೀ ರೇಣುಕಾಚಾರ್ಯರ ಜಯಂತಿ ಹಾಗೂ ಯುಗಮಾನೋತ್ಸವ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಾ ಸ್ತ್ರೀ ಪುರುಷರಿಗೆ ಎಲ್ಲಾ ವರ್ಗ ವರ್ಣದವರಿಗೆ ದೇವರ ಪೂಜೆಗೆ ಅವಕಾಶ ಕಲ್ಪಿಸಿದವರೇ ರೇಣು ಕಾಚಾರ್ಯರು.



ವಿರೋಧ ರಹಿತ ಶೈವ ಧರ್ಮವೇ ವೀರಶೈವ ಧರ್ಮ ಎಂದು ಸಾರಿದವರು. ನಾವು ರೇಣುಕಾಚಾರ್ಯರನ್ನು ವಿಜೃಂಭಿಸುವುದಕ್ಕಿಂತ ಅವರ ಆದರ್ಶ ಗಳನ್ನ ಅನುಸರಿಸುತ್ತಾ ಅವರ ತತ್ವ ಸಿದ್ಧಾಂತಗಳನ್ನ ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಅವರು ರಚಿಸಿದ 10 ಸಿದ್ಧಾಂತದ ಸೂತ್ರ ಗುರುವು ತನ್ನವರೇ ನಾನ ಜಗತ್ತಿನಲ್ಲಿ ಮಾನವ ಧರ್ಮಕ್ಕೆ ಜಯವಾಗಲಿ ಎಂದು ಬೋಧಿಸಿದ ಏಕೈಕ ಧರ್ಮ ಅದು ಜಗದ್ಗುರು ರೇಣುಕಾಚಾರ್ಯರು ಸ್ಥಾಪಿಸಿದ ವೀರಶೈವ ಧರ್ಮ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವೀರಶೈವ ಜಂಗಮ ಸಮಾಜದ ತಾಲೂಕ ಅಧ್ಯಕ್ಷ ಪ್ರಭು ಸ್ವಾಮಿ ಅತ್ತನೂರು ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಮಾತಾ ಮಾಣಿಕೇಶ್ವರಿ ಅಮ್ಮನವರು ಮಾಣಿಕೇಶ್ವರಿ ಮಠ ಲಿಂಗಸಗೂರು, ಶರಣಯ್ಯ ತಾತ ಹುನುಕುಂಟಿ, ಕೇಂದ್ರದ ಮಾಜಿ ಸಚಿವರಾದ ಬಸವರಾಜ ಪಾಟೀಲ್ ಅನ್ವರಿ, ಮಹದೇವಯ್ಯ ಸ್ವಾಮಿ ಗೌಡೂರ, ವೀರಭದ್ರಯ್ಯ ಸ್ವಾಮಿ ಯಲಗಲದಿನ್ನಿ, ಅಮರೇಶ್, ಕುಮಾರಸ್ವಾಮಿ ಹಿರೇಮಠ, ಅಮರೇಶ್ ವೀರಾಪುರ್, ಜಗನ್ನಾಥ್ ಚಿತಾಪುರ, ಮಲ್ಲಪ್ಪ ಹೊಗಾರ್ ಸೇರಿದಂತೆ ಇತರರಿದ್ದರು .

# ಕೆ.ಹೊಸಳ್ಳಿಯಲ್ಲಿ ಕ್ಷೇತ್ರ ಆರೋಗ್ಯ ಅಧಿಕಾರಿಗಳಿಂದ ಆರೋಗ್ಯ ಸೇತು ಕಾರ್ಯಕ್ರಮ: ಗೀತಾ ಹಿರೇಮಠ



❑ ನೈಜ್ಯ ದೆಸೆ ನ್ಯೂಸ್


ಗುಡ್ಡಗಾಡು ಪ್ರದೇಶ ಮತ್ತು ಸಂಪರ್ಕ ರಹಿತ ಪ್ರದೇಶ ಗಳಲ್ಲಿ ತುರ್ತು ಪರಿಸ್ಥಿತಿಗಳಲ್ಲಿ ಆರೋಗ್ಯ ಸೇವೆಯ ಜೊತೆಗೆ ಗರ್ಭಿಣಿಯರ ಶಿಶುಗಳ ಆರೋಗ್ಯದ ಕುರಿತು ಕಿಶೋರಿಯರು ಮತ್ತು ವೃದ್ಧರ ಆರೋಗ್ಯ ಪರಿಶೀಲನೆ ನಡೆಸುವುದು ಮತ್ತು ಹದಿಹರೆಯದ ಹೆಣ್ಣು ಮಕ್ಕಳ ಸಮಸ್ಯೆ, ಪೌಷ್ಟಿಕ ಆಹಾರದ ಬಗ್ಗೆ ಸಾರ್ವಜನಿಕರಿಗೆ ಆರೋಗ್ಯ ಶಿಕ್ಷಣದ ಜೊತೆಗೆ ಆರೋಗ್ಯ ಸೇವೆ ಹಾಗೂ ಆರೋಗ್ಯ ಜಾಗೃತಿ ಮೂಡಿಸುವುದು ಗಂಡಾಂತರ ಗರ್ಭಿಣಿ ಹಾಗೂ ಗರ್ಭಿಣಿಯರ ರಕ್ತ ಪರೀಕ್ಷೆ ಸೂಕ್ತ ಎಂದು ಕ್ಷೇತ್ರ ಆರೋಗ್ಯ ಶಿಕ್ಷಣ ಅಧಿಕಾರಿ ಗೀತಾ ಹಿರೇಮಠ ಆರೋಗ್ಯ ಸಲಹೆಯನ್ನು ನೀಡಿದರು.

ಜಿಲ್ಲಾಡಳಿತ ಜಿಲ್ಲಾ ಪಂಚಾಯತಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಸಿಂಧನೂರು, ತುರ್ವಿಹಾಳ ಸಮುದಾಯ ಆರೋಗ್ಯ ಕೇಂದ್ರದ ವ್ಯಾಪ್ತಿಗೆ ಬರುವ ಹೊಸಳ್ಳಿ. ಕೆ, ಗ್ರಾಮದಲ್ಲಿ ಇಂದು ಆರೋಗ್ಯ ಸೇತು ಕಾರ್ಯಕ್ರಮದ ಅಡಿಯಲ್ಲಿ ಮಾತನಾಡಿದರು. ನಂತರ ಇತರೆ ಸಾಂಕ್ರಾಮಿಕ ರೋಗಗಳ ಬಗ್ಗೆ, ಬಿಪಿ, ಶುಗರ್, ಅಸಾಂಕ್ರಾಮಿಕ ರೋಗಗಳ ಪರೀಕ್ಷೆ ಮಾಡಿ ಚಿಕಿತ್ಸೆ ನೀಡಲಾಯಿತು. ಈ ಸಂದರ್ಭದಲ್ಲಿ: ಪವಿತ್ರ ಸಿಎಚ್ಒ, ಆಂಜನೇಯ, ಆಶಾ ಕಾರ್ಯಕರ್ತೆ ಹನುಮಂತಿ, ಅಂಗನವಾಡಿ ಕಾರ್ಯಕರ್ತೆ ಮಗ್ಗೆಮ್ಮ, ಮೈಬೂಬ್ ಸಾಬ್, ಗರ್ಭಿಣಿ ತಾಯಂದಿರು, ಹಿರಿಯ ನಾಗರಿಕರು ಉಪಸ್ಥಿತರಿದ್ದರು.

# ಇಂದಿನಿಂದ ಬಿಳಿಜೋಳ ಖರೀದಿ ಪ್ರಕ್ರಿಯೆ ಆರಂಭ: ಜಿಲ್ಲಾಧಿಕಾರಿ ನಿತೀಶ್ ಕೆ.

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಮಾರ್ಚ್ 16 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ 2025-26ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಮುಂಗಾರು ಮತ್ತು ಹಿಂಗಾರು ಋತುವಿನಲ್ಲಿ ಬಿಳಿಜೋಳವನ್ನು ಬೆಳೆದಿರುವ ರೈತರು ಈಗಾಗಲೇ ತಮ್ಮ ಎಫ್‌ಐಡಿ ಯೊಂದಿಗೆ ನೋಂದಣಿ ಮಾಡಿಕೊಂಡಿದ್ದು, ಮಾರ್ಚ್ 17 ರಿಂದ ಜಿಲ್ಲೆಯಲ್ಲಿರುವ ಎಲ್ಲಾ ಖರೀದಿ ಕೇಂದ್ರಗಳಲ್ಲಿ ವಿದ್ಯುಕ್ತವಾಗಿ ಖರೀದಿ ಪ್ರಕ್ರಿಯೆಯನ್ನು ಆರಂಭಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.**



ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಲಾದ ಅನುಕ್ರಮವಾರು ಮೊದಲು ಮುಂಗಾರು ಋತುವಿನಲ್ಲಿ ಬೆಳೆದ ರೈತರಿಂದ ಖರೀದಿಯನ್ನು ಮಾಡಲಾಗುವುದು. ರೈತರು ಆತುರ ಪಡದೇ ಅಥವಾ ನೂಕು ನುಗ್ಗಲು ಮಾಡದೇ ತಮಗೆ ಖರೀದಿ ಕೇಂದ್ರದಿಂದ ನೀಡಲಾಗುವ ದಿನಾಂಕವಾರು ತಾವು ಬೆಳೆದಿರುವ ಜೋಳವನ್ನು ಸರಬರಾಜು ನೀಡುವುದು. ಅಲ್ಲದೇ ಖರೀದಿ ಕೇಂದ್ರಕ್ಕೆ ಬರುವ ಮುಂಚಿತವಾಗಿಯೇ ದಾಸ್ತಾನಿನ ಗುಣಮಟ್ಟ, ತೇವಾಂಶ ಹಾಗೂ ಸ್ವಚ್ಛತೆಯ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.

ಈಗಾಗಲೇ ಜಿಲ್ಲೆಯಲ್ಲಿ ನೋಂದಣಿಯಾಗಿರುವ ಸರ್ವೆ ನಂ ಹಾಗೂ ಎಫ್‌ಐಡಿಗಳನ್ನು ಬೆಳೆದರ್ಶಕ ಆಪ್ ಮುಖಾಂತರ ನೈಜ್ಯತೆಯನ್ನು ಪರಿಶೀಲಿಸಲಾಗಿ, ಸಂಶಾಯತ್ಮಾಕ ಹಾಗೂ ಬಿಳಿ ಜೋಳವನ್ನು ಬೆಳೆಯದೇ ಇರುವ ಸರ್ವೆ ನಂ. ವಾರು ಎಫ್‌ಐಡಿ ಗಳನ್ನು ಬ್ಲಾಕ್ ಮಾಡಲು ಕ್ರಮವಹಿಸಲಾಗಿದೆ ಇದಕ್ಕೆ ಆಕ್ಷೇಪಣೆಗಳೇನಾದರು ಇದ್ದಲ್ಲಿ, ಸರ್ಮಥನೀಯ ದಾಖಲೆಗಳೊಂದಿಗೆ ಆಯಾ ತಾಲ್ಲೂಕಿನ ತಹಶೀಲ್ದಾರರ ಕಚೇ-ರಿಗೆ ಸಂಪರ್ಕಿಸಬಹುದಾಗಿದೆ. ಮತ್ತು ಬಿಳಿ ಜೋಳವನ್ನು ಬೆಳೆಯದೇ ನೋಂದಣಿ ಮಾಡಿಕೊಂಡು ಖರೀದಿ ಕೇಂದ್ರಗಳಿಗೆ ಜೋಳವನ್ನು ಸರಬರಾಜು ಮಾಡಿರುವುದು ಕಂಡುಬಂದಲ್ಲಿ ಅಂತವರ ವಿರುದ್ಧ ಕಾನೂನತ್ಮಕ ಕ್ರಮವನ್ನು ಕೈಗೊಳ್ಳುವುದಲ್ಲದೇ ಈ ಖರೀದಿಯ ಹಣವನ್ನು ತಡೆಹಿಡಿಯಲಾಗುವುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏಪ್ರಿಲ್ 9 ರಂದು ದಾವಣಗೆರೆ, ಬಾಗಲಕೋಟೆ ಉಪ ಚುನಾವಣೆ, ಮೇ 4 ರಂದು ಫಲಿತಾಂಶ

❑ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಕೇಂದ್ರ ಚುನಾವಣಾ ಆಯೋಗವು ರಾಜ್ಯದ ದಾವಣಗೆರೆ ದಕ್ಷಿಣ, ಬಾಗಲಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಉಪ ಚುನಾವಣೆಯ ದಿನಾಂಕವನ್ನು ಘೋಷಿಸಿದೆ.**

ಪಂಚರಾಜ್ಯಗಳ ಚುನಾವಣೆಯ ಜೊತೆಗೆ ಕರ್ನಾಟಕದ ಎರಡು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೂ ಮುಹೂರ್ತ ನಿಗದಿಯಾಗಿದೆ. ರಾಜ್ಯದ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳಿಗೆ ಏಪ್ರಿಲ್ 9 ರಂದು ಉಪಚುನಾವಣೆ ನಡೆಯಲಿದೆ. ಮಾ. 26 ರಂದು ನಾಮಪತ್ರ



ವಾಪಸ್ ಪಡೆಯಲು ಕೊನೆಯ ದಿನವಾಗಿದೆ.

ಮಾಜಿ ಸಚಿವರಾದ ಶಾಮನೂರು ಶಿವಶಂಕರಪ್ಪ ಅವರ ನಿಧನದ ಬಳಿಕ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ಮತ್ತುಎಚ್ .ವೈ . ಮೇಟಿ ಅವರ ನಿಧನದ ಬಳಿಕ ಬಾಗಲಕೋಟೆ ವಿಧಾನಸಭಾ ಕ್ಷೇತ್ರ ತೆರವಾಗಿವೆ. ಈ ಎರಡು ಕ್ಷೇತ್ರಗಳಿಗೆ ಏಪ್ರಿಲ್ 9ರಂದು ಮತದಾನ ಹಾಗೂ ಮೇ 4 ರಂದು ರಾಜ್ಯದ ಉಪಚುನಾವಣೆ ಫಲಿತಾಂಶ ಪ್ರಕಟವಾಗಲಿದೆ ಅಂದೇ ಅಭ್ಯರ್ಥಿಗಳ ಭವಿಷ್ಯ ನಿರ್ಧಾರವಾಗಲಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಸ್ಪಷ್ಟಪಡಿಸಿದ್ದಾರೆ.

# ರಾಯಚೂರಿನಲ್ಲಿ ರಾಷ್ಟ್ರೀಯ ರೈತ ದಿನಾಚರಣೆ ಆಚರಣೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ರಾಷ್ಟ್ರೀಯ ರೈತ ದಿನಾಚರಣೆ ಅಂಗವಾಗಿ ಶನಿವಾರ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ (ರಿ) ರಾಯಚೂರು ಜಿಲ್ಲಾ ಘಟಕದ ವತಿಯಿಂದ "ರೈತರಿಗೆ ಶರಣರಿಂದ ಹಿತನುಡಿ, ಕೃಷಿ ತಂತ್ರಜ್ಞರಿಂದ ಸಲಹೆ ಹಾಗೂ ಬೃಹತ್ ಉಚಿತ ಆರೋಗ್ಯ ತಪಾಸಣೆ" ಶಿಬಿರವನ್ನು ಭರ್ಜರಿಯಾಗಿ ಆಯೋಜಿಸಲಾಯಿತು.**

ಕಾರ್ಯಕ್ರಮವು ರಾಯಚೂರಿನ Dr. B. R. Ambedkar Circle ನಲ್ಲಿ ಶ್ರೀ ಶ್ರೀ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಆರಂಭವಾಯಿತು. ಸಣ್ಣ ನೀರಾವರಿ ಸಚಿವರಾದ N. S. Boseraju ಅವರು ಎತ್ತಿನ ಬಂಡಿ ಚಾಲನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಸಂವಿಧಾನ ಶಿಲ್ಪಿ ಃ. ಖ. ಂಟಭಜಜಿಇಚಿಡಿ ಅವರ ಪ್ರತಿಮೆಗೆ ರಾಜ್ಯ ಅಧ್ಯಕ್ಷರಾದ ಶಾಂತಗೌಡ ಚನ್ನಪಟ್ಟಣ, ರಾಜ್ಯ ಉಪಾಧ್ಯಕ್ಷರಾದ ಲಕ್ಷ್ಮಿಕಾಂತ್ ಎ. ಪಾಟೀಲ್, ಜಿಲ್ಲಾ ಅಧ್ಯಕ್ಷರಾದ ಇಂದ್ರಜೀತ್ ಯಾದವ್, ಜಿಲ್ಲಾ ಉಪಾಧ್ಯಕ್ಷರಾದ ಮುಜಾಹಿದ್ ಮರ್ಚೆಂಡ್, ಜಿಲ್ಲಾ ಗೌರವಾಧ್ಯಕ್ಷರಾದ ಮಲ್ಲಿಕಾರ್ಜುನ ಪಾಟೀಲ್ ಹಾಗೂ ಜಿಲ್ಲಾ ಕಾರ್ಯದರ್ಶಿ ಮಹದೇವಪ್ಪ ಯಾದವ್ ಅವರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಬಳಿಕ ಮೆರವಣಿಗೆಯ ಮೂಲಕ ರಂಗಮಂದಿರಕ್ಕೆ ತೆರಳಿ ಕಾರ್ಯಕ್ರಮವನ್ನು ಮುಂದುವರಿಸಿದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ಆರ್. ನಾಯಕ್ ಹಾಗೂ ರೂಪ ಶ್ರೀನಿವಾಸ್ ನಾಯಕ್



ಜ್ಯೋತಿ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಮಲ್ಲಿಕಾರ್ಜುನ ಪಾಟೀಲ್ ಮತ್ತು ಮಹಾದೇವಪ್ಪ ಯಾದವ್ ಅವರು ನೇಗಿಲ ಪೂಜೆ ನೆರವೇ-ರಿಸಿದರು. ಆನಂದ ಕುಮಾರ್ ಮಡಿವಾಳ ಹಾಗೂ ಸುರೇಶ್ ಪೂಜಾರಿ ಅವರು ಭಾರತದ ಮಾಜಿ ಪ್ರಧಾನಿ Chaudhary Charan Singh ಹಾಗೂ ರೈತ ಚಳವಳಿಯ ಪ್ರಮುಖ ನಾಯಕ M. D. Nanjun-daswamy ಅವರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿದರು.

ರೈತನ ಶ್ರಮವೇ ದೇಶದ ಆಧಾರ

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಅಧ್ಯಕ್ಷರಾದ ಇಂದ್ರಜೀತ್ ಯಾದವ್ ಅವರು, "ರೈತರು ಶ್ರಮಪಟ್ಟು ಬೆಳೆದರೆ ಮಾತ್ರ ವಿಶ್ವಕ್ಕೆ ಅನ್ನ ಸಿಗುತ್ತದೆ.

ರೈತನ ಶ್ರಮವೇ ದೇಶದ ಆದ-ಾರ. ರೈತನಿಗೆ ಬೆಂಬಲ ಸಿಕ್ಕಾಗ ಮಾತ್ರ ಅವನು ಸಂತೋಷದಿಂದ ಬದುಕಲು ಸಾಧ್ಯ" ಎಂದು ಹೇಳಿದರು.

ಜಿಲ್ಲಾ ಉಪಾಧ್ಯಕ್ಷರಾದ ಮುಜಾಹಿದ್ ಮರ್ಚೆಂಡ್ ಮಾತನಾಡಿ, ಫೆಬ್ರವರಿ 9ರಂದು ಸಂಘಟನೆಯಿಂದ "ರೈತರ ನಡೆ ಆಲಮಟ್ಟಿ ಕಡೆ" ಎಂಬ ಹೋರಾಟ ಹಮ್ಮಿಕೊಳ್ಳಲಾಗಿತ್ತು ಎಂದು ತಿಳಿಸಿದರು. ಕೃಷ್ಣ ಮೇಲ್ದಂಡೆ ಯೋಜನೆ (ಯುಕೆಪಿ ಹಂತ-3) ಜಾರಿಗೆ ಬರಲು Almatti Dam ಅನ್ನು ಸುಮಾರು 17 ಅಡಿ ಎತ್ತ-ರಿಸಬೇಕಾಗಿದೆ. ಆಗ ಮಾತ್ರ ರೈತರಿಗೆ ಸಮರ್ಪಕವಾಗಿ ನೀರು ಒದಗಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಇತ್ತೀಚಿನ ಬಜೆಟ್‌ನಲ್ಲಿ ಆಲಮಟ್ಟಿ ಡ್ಯಾಂ ಎತ್ತರಿಕರಣದಿಂದ ಮುಳುಗಡೆಯಾಗುವ ಭೂಮಿಗೆ ಪ್ರತಿ ಎಕರೆಗೆ 30 ರಿಂದ 40 ಲಕ್ಷ ರೂ. ಪರಿಹಾರ ಘೋಷಣೆ ಮಾಡಿರುವುದಕ್ಕೆ ಸಂತೋಷ ವ್ಯಕ್ತಪಡಿಸಿ, ಯೋಜನೆ ಸಂಪೂರ್ಣ ಜಾರಿಗೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರಾಯಚೂರು ಗ್ರಾಮೀಣ ಕ್ಷೇತ್ರದ ಮಾಜಿ ಶಾಸಕರಾದ ತಿಪ್ಪರಾಜ ಹವಾಲ್ದಾರ್



ವರದಿಗಾರರೊಂದಿಗೆ ಮಾತನಾಡಿ ರೈತರಿಗೂ ಎಲ್ಲಾ ಹೋರಾಟಕ್ಕೆ ಬೆಂಬಲ ಕೊಡುತ್ತೇವೆ ಎಂದು ಹೇಳಿದರು

ರೈತರ ಹಕ್ಕುಗಳಿಗಾಗಿ ನಿರಂತರ ಹೋರಾಟ

ರಾಜ್ಯ ಉಪಾಧ್ಯಕ್ಷರಾದ ಲಕ್ಷ್ಮಿಕಾಂತ್ ಪಾಟೀಲ್ ಮದ್ದರ್ಕಿ ಮಾತನಾಡಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ ಸಂಘಟನೆ ಸೋಮನಮರಡಿ ಇಂದ ಜಿಲ್ಲಾ ಗೌರವ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಪಾಟೀಲ್ ಹಾಗೂ ಜಿಲ್ಲಾ ಕಾರ್ಯದರ್ಶಿಯಾದ ಮಹದೇವಪ್ಪ ಯಾದವರ ನೇತೃತ್ವದಲ್ಲಿ ರೈತರ ಹಕ್ಕುಗಳಿಗಾಗಿ ನಿರಂತರ ಹೋರಾಟ ನಡೆಸುತ್ತಿದೆ ಎಂದು ಹೇಳಿದರು. ಈ ಹಿಂದೆ ಜಾಲಹಳ್ಳಿಯಲ್ಲಿ ರೈತರು ಹಾಗೂ ಸಾರ್ವಜನಿಕ-ರಿಗಾಗಿ ಉಚಿತ ಆರೋಗ್ಯ ತಪಾಸಣೆ ಕಾರ್ಯಕ್ರಮ ಕೂಡ ಆಯೋಜಿಸಲಾಗಿತ್ತು ಎಂದು ತಿಳಿಸಿದರು.

ಕೃಷ್ಣ ಮೇಲ್ದಂಡೆ ಯೋಜನೆ ಪಕ್ಷಾತೀತವಾಗಿ ಹೋರಾಟ ಮಾಡುವ ಅಗತ್ಯವಿದೆ. ಕಾಲುವೆಗಳು ನಿರ್ಮಾಣವಾದರೂ ರೈತರಿಗೆ ಸಮರ್ಪಕವಾಗಿ ನೀರು ತಲುಪುತ್ತಿಲ್ಲ. ಯುಕೆಪಿ-3 ಯೋಜನೆಯಡಿ ಭೂ ಪರಿಹಾರ ನೀಡದೇ ಭೂಸ್ವಾಧೀನಗೊಂಡ ರೈತರ ಪರವಾಗಿ ಮುಂದಿನ ದಿನಗಳಲ್ಲಿ ಹೋರಾಟ ನಡೆಸಲಾಗುವುದು ಎಂದು ಹೇಳಿದರು. ಸಮಾಜದಲ್ಲಿ ಸೂಜಿದಾರದಂತೆ ಎಲ್ಲರನ್ನು ಜಾತಿ ಭೇದವಿಲ್ಲದೆ ಜೋಡಿಸಬೇಕು ಸಮಾಜದಲ್ಲಿ ಎಲ್ಲರನ್ನು ಒಗ್ಗೂಡಿಸುವ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ರೈತರಿಗೆ ಸದಾ ಬೆಂಬಲ ಶ್ರೀದೇವಿ ನಾಯಕ್

ಈ ಸಂದರ್ಭದಲ್ಲಿ ಕೆಪಿಸಿಸಿ ಮಹಿಳಾ ವಿಭಾಗದ ರಾಜ್ಯ ಉಪಾಧ್ಯಕ್ಷರಾದ ಶ್ರೀದೇವಿ ಆರ್. ನಾಯಕ್ ಮಾತನಾಡಿ, ರೈತರು ದೇಶದ ಬೆನ್ನೆಲುಬಾಗಿದ್ದು ಕೃಷಿ ಚಟುವಟಿ-ಕೆಗಳಿಂದ ನಮ್ಮ ದೇಶ ಪ್ರಪಂಚಕ್ಕೆ ಮಾದರಿಯಾಗಿದೆ ಎಂದು ಹೇಳಿದರು. ರೈತರ ಹೋರಾಟಗಳಿಗೆ ನಾವು ಸದಾ ಬೆಂಬಲ ನೀಡುತ್ತೇವೆ ಎಂದು ತಿಳಿಸಿದರು.

ರೂಪ ಶ್ರೀನಿವಾಸ್ ನಾಯಕ್ ಅವರು ಮಾತನಾಡಿ ರೈತರು ಪ್ರತಿಯೊಂದು ಕ್ಷೇತ್ರದಲ್ಲೂ ಮುನ್ನಡೆಯಬೇಕು ಎಂದು ಕರೆ ನೀಡಿದರು.

ಜಾಲಹಳ್ಳಿಯ ವರದಿಗಾರರಿಗೆ ಸನ್ಮಾನ

ಇದೇ ವೇಳೆ ಜಾಲಹಳ್ಳಿ?ದೇವದುರ್ಗ ವಿಭಾಗದ ಖಿಗ20 ಕನ್ನಡ ನ್ಯೂಸ್ ಚಾನೆಲ್ ವರದಿಗಾರರಾದ ಖಾಜಾ ಹುಸೇನ್ ಬಾಬಾ ಜಾಲಹಳ್ಳಿ ಅವರನ್ನು ರೈತರ ಪರವಾಗಿ ನಿಂತಿರುವುದಕ್ಕಾಗಿ ಅಭಿನಂದಿಸಿ ಸನ್ಮಾನಿಸಲಾಯಿತು. ರಾಯಚೂರು ಜಿಲ್ಲೆಯ ವಿವಿಧ ಗ್ರಾಮಗಳಿಂದ ಆಗಮಿಸಿದ ಪ್ರಗತಿಪರ ರೈತರಿಗೆ ಕೂಡ ಸನ್ಮಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆಯ ರಾಜ್ಯ ಉಪಾಧ್ಯಕ್ಷರಾದ ಲಕ್ಷ್ಮಿಕಾಂತ್ ಪಾಟೀಲ್ ಮದ್ದರ್ಕಿ, ಜಿಲ್ಲಾ ಗೌರವಾಧ್ಯಕ್ಷರಾದ ಮಲ್ಲಿಕಾರ್ಜುನ ಪಾಟೀಲ್, ಜಿಲ್ಲಾ ಅಧ್ಯಕ್ಷರಾದ ಇಂದ್ರಜೀತ್ ಯಾದವ್, ಜಿಲ್ಲಾ ಉಪಾಧ್ಯಕ್ಷರಾದ ಮುಜಾಹಿದ್ ಮರ್ಚೆಂಡ್, ಜಿಲ್ಲಾ ಕಾರ್ಯದರ್ಶಿಗಳಾದ ಮಹದೇವಪ್ಪ ಯಾದವ್ ಸೇರಿದಂತೆ ವಿವಿಧ ತಾಲೂಕುಗಳ ಪದಾಧಿಕಾ-ರಿಗಳು ಹಾಗೂ ರೈತರು ಭಾಗವಹಿಸಿದ್ದರು.

## ನೇಮಕಾತಿ ಪ್ರಕಟಣೆ

SSB ನೇಮಕಾತಿ 2026–827 ಕಾನ್ಸ್‌ಟೇಬಲ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ SSB ನೇಮಕಾತಿ 2026: 827 ಕಾನ್ಸ್‌ಟೇಬಲ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. SSB ಅಧಿಕೃತ ಅಧಿಸೂಚನೆ ಮಾರ್ಚ್ 2026 ರ ಮೂಲಕ ಕಾನ್ಸ್‌ಟೇಬಲ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಸಶಸ್ತ್ರ ಸೀಮಾ ಬಾಲ್ ಅರ್ಜಿಗಳನ್ನು ಆಹ್ವಾನಿಸಿದೆ. ಅಖಿಲ ಭಾರತ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 19-Apr-2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 21–03–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 19–ಏಪ್ರಿಲ್–2026 ಅಧಿಕೃತ ವೆಬ್‌ಸೈಟ್: ssb.gov.in

# ಮಹಾನಗರ ಪಾಲಿಕೆಯ ಆಯವ್ಯಯ ಪೂರ್ವಭಾವಿ ಸಭೆ ಅಭಿವೃದ್ಧಿಗೆ ಪೂರಕವಾದ ಬಜೆಟ್ ಸಿದ್ಧಪಡಿಸಲು ಸಾರ್ವಜನಿಕರ ಸಲಹೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಮಹಾನಗರ ಪಾಲಿಕೆಯ 2026–27ನೇ ಸಾಲಿನ ಆಯವ್ಯಯ ತಯಾರಿಕೆ ಹಿನ್ನಲೆಯಲ್ಲಿ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ದಂದು ಪಾಲಿಕೆಯ ಜೋನಲ್ 01ರ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಯಿತು. ಈ ವೇಳೆ ಜುಬಿನ್ ಮೊಹಾಪಾತ್ರ ಅವರು ಮಾತನಾಡಿ, ರಾಯಚೂರು ನಗರದ ಸಮಗ್ರ ಅಭಿವೃದ್ಧಿಗೆ ಪೂರಕವಾದ ಬಜೆಟ್ ಸಿದ್ಧಪಡಿಸಲು ಸಾರ್ವಜನಿಕರ ನೇರ ಪಾಲ್ಗೊಳ್ಳುವಿಕೆ ಅತ್ಯಗತ್ಯವಾಗಿದೆ ಎಂದರು.**

ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೇಗೇರಿದ ನಂತರ ಮೊದಲ ಬಜೆಟ್ ಇದಾಗಿದ್ದು, ಪ್ರತಿಯೊಬ್ಬ ನಾಗರಿಕರು ಮುಕ್ತವಾಗಿ ತಮ್ಮ ಸಲಹೆ ಮತ್ತು ಸೂಚನೆಗಳನ್ನು ನೀಡಬೇಕು ಎಂದರು. ಹಿಂದಿನ ವರ್ಷಕ್ಕೆ ಹೋಲಿಸಿದರೆ ನಗರ ಪ್ರದೇಶ ಅಭಿವೃದ್ಧಿ ಹೊಂದಿದೆ. ಬಜೆಟ್ ಅನುಗುಣವಾಗಿ ಆಧ್ಯತೆ ಮೇರೆಗೆ ಕೆಲಸ ಕಾಮಗಾರಿ ಮಾಡಲು ಸಲಹೆ ನೀಡಬೇಕೆಂದರು. ಹಿಂದಿನ ವರ್ಷದಲ್ಲಿ ಪ್ಲಾಸ್ಟಿಕ್ ನಿರ್ಮೂಲನೆ, ಕಸ ಮುಕ್ತ, ರಾಜ ಕಾಲುವೆ ಸ್ವಚ್ಛತ ಮಾಡಿ ಮಳೆಗಾಲದಲ್ಲಿ ತೊಂದರೆ ತಪ್ಪಿಸಲಾಗಿದೆ ಎಂದರು. ಪಾಲಿಕೆಯು ಆಶ್ರಯ ಯೋಜನೆಯಡಿ 2






ಸಾವಿರ ಮನೆಗಳ ನಿರ್ಮಾಣ ಮಾಡಿದೆ. ಅವುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ಎಂದು ಪಾಲಿಕೆಯ ಆಯುಕ್ತರು ಸಭೆಗೆ ಮಾಹಿತಿ ನೀಡಿದರು.

ಈ ವೇಳೆ ಮುಖಂಡರಾದ ರವಿಂದ್ರ ಜಲ್ದಾರ್ ಅವರು ಮಾತನಾಡಿ, ನಗರಕ್ಕೆ ರಾಂಪೂರ ಮತ್ತು ಕೃಷ್ಣ ನದಿಯಿಂದ ನೀರು ಸರಬರಾಜು ಮಾಡಲಾಗುತ್ತದೆ, ಮೋಟಾರುಗಳು ದುರಸ್ತಿಯಾದಲ್ಲಿ ನೀರು ಸರಬರಾಜು ನಿಲ್ಲುತ್ತದೆ. ಹೆಚ್ಚುವರಿ ಮೋಟಾರುಗಳ ವ್ಯವಸ್ಥೆ ಒದಗಿಸಿಕೊಡಬೇಕು. ಹೊಸ ಯೋಜನೆಗಳನ್ನು ರೂಪಿಸಬೇಕು. ನಗರದಲ್ಲಿ ಸುಸಜ್ಜಿತ ಮಾರುಕಟ್ಟೆ ವ್ಯವಸ್ಥೆ ಮಾಡಬೇಕು ಎಂದರು. ಈ ವೇಳೆ ಉಸ್ಮಾನಿಯಾ ತರಕಾರಿ ಮಾರುಕಟ್ಟೆಯ ಮಾಜಿ ಅಧ್ಯಕ್ಷರಾದ ಎನ್. ಮಹಾವೀರ ಅವರು ಮಾತನಾಡಿ, ನಗರ ದೊಡ್ಡ ಪ್ರಮಾದಲ್ಲಿ ಬೆಳೆಯುತ್ತಿದೆ. ಇದಕ್ಕೆ ತಕ್ಕಂತೆ ಮಾರುಕಟ್ಟೆ ವಿಸ್ತರಣೆ ಮಾಡಬೇಕು. ನಾಲ್ಕು ದಿಕ್ಕಿನಲ್ಲಿ ಜೋನ್ ವಲಯ ಮಾಡಿ, ತರಕಾರಿ ಮಾರುಕಟ್ಟೆ, ಹೂ–ಹಣ್ಣುಗಳ ಮಾರುಕಟ್ಟೆ, ಮಾಂಸ ಮಾರುಕಟ್ಟೆ ಮಾಡಬೇಕು ಎಂದರು.

6ಈ ವೇಳೆ ದಲಿತ ಸಂಘಟನೆ ಮುಖಂಡ ರಾಜು ಪಟ್ಟಿ ಅವರು ಮಾತನಾಡಿ, ನಗರದಲ್ಲಿರುವ ಶಿಕ್ಷಣ ಸಂಸ್ಥೆಗಳಿಂದ ಸರಿಯಾದ ತೆರಿಗೆ ಸಂಗ್ರಹಣೆಯಾಗಬೇಕು. ನಗರದಲ್ಲಿ ಸಾಕಷ್ಟು ರಸ್ತೆಗಳಲ್ಲಿ ಸಾರ್ವಜನಿಕ ಶೌಚಾಲಯಗಳಿಲ್ಲ. ಇದರಿಂದ ನಗರದ ಜನರಿಗೆ ತೊಂದರೆಯಾಗಿದೆ. ಕೂಡಲೇ ಸಂಬಂಧಿಸಿದ ಅಧಿಕಾರಿಗಳು ಕ್ರಮವಹಿಸಬೇಕೆಂದರು. ಈ ವೇಳೆ ಬೀದಿಬದಿ ವ್ಯಾಪಾರಿಗಳ ಸಂಘದ ಮುಖ್ಯಸ್ಥ ಯೇಸುಮಿತ್ರ ಅವರು ಮಾತನಾಡಿ, ನಗರದ ಬೀದಿ ಬೀದಿಗಳಲ್ಲಿ ಸಣ್ಣ ಪುಟ್ಟ ಅಂಗಡಿ ಇಟ್ಟುಕೊಂಡು ಜೀವನ ನಡೆಸುತ್ತಿದ್ದು, ರಸ್ತೆ ತೆರವು ನೆಪದಲ್ಲಿ ಅಂಗಡಿಗಳನ್ನು ತೆರವು ಮಾಡುವ ಮುನ್ನ ಮಾಹಿತಿ ನೀಡಬೇಕು. ಬೀದಿಬದಿ ವ್ಯಾಪಾರಿಗಳಿಗೆ ಪ್ರತೇಕವಾಗಿ ಮಳಿಗೆ ಮಾಡಿ ಒಂದೇ ಕಡೆಗೆ ಇರುವಂತೆ ವ್ಯವಸ್ಥೆ ಕಲ್ಪಿಸಿಕೊಡಬೇಕೆಂದರು.

ಇದೇ ಸಂದರ್ಭಗಳಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತರಾದ ಶರಣಪ್ಪ, ಪಾಲಿಕೆಯ ಅಭಿವೃದ್ಧಿ ವಿಭಾಗದ ಉಪ ಆಯುಕ್ತರಾದ ಭರತ್, ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಜಿಲ್ಲಾ ಪಂಚಾಯತ ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ್, ಪಾಲಿಕೆಯ ವಲಯ 01ರ ಉಪ ಆಯುಕ್ತರಾದ ಮಲ್ಲಿಕಾರ್ಜುನ, ಪಾಲಿಕೆಯ ಸಮನಯ ಅಧಿಕಾರಿ ಕೃಷ್ಣ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿವಿಧ ಮುಖಂಡರು ಸಭೆಯಲ್ಲಿ ಇದ್ದರು.

## ಒಳಮೀಸಲಿಗೆ ಒತ್ತಾಯಿಸಿ ಹರಿಹರದಿಂದ ಬೆಂಗಳೂರಿಗೆ ಪಾದಯಾತ್ರೆ : ಶ್ರೀ ಷಡಾಕ್ಷರಮುನಿ ಸ್ವಾಮೀಜಿ ನೇತೃತ್ವ

❑ ನೈಜ್ಯ ದೆಸೆ ನ್ಯೂಸ್

**ಚಿತ್ರದುರ್ಗ : ಮಾದಿಗ ಸಮುದಾಯ ಸಾಮಾಜಿಕ ನ್ಯಾಯಕ್ಕಾಗಿ ಕಳೆದ 35 ವರ್ಷಗಳಿಂದಲೂ ಹೋರಾಟ ನಡೆಸಿಕೊಂಡು ಬರುತ್ತಿದ್ದರು ಈವರೆಗೆ ಅಧಿಕಾರ ನಡೆಸಿದ ಎಲ್ಲಾ ಸರ್ಕಾರಗಳು ಅನ್ಯಾಯ ಮಾಡಿಕೊಂಡು ಬಂದಿವೆ ಎಂದು ಕೋಡಿಹಳ್ಳಿ ಆದಿಜಾಂಬವ ಮಠದ ಶ್ರೀ ಷಡಾಕ್ಷರಮುನಿ ಸ್ವಾಮೀಜಿ ಆಕ್ರೋಶ ವ್ಯಕ್ತಪಡಿಸಿದರು.**



ಒಳಮೀಸಲಾತಿ ಆಧಾರದಲ್ಲಿ ಹುದ್ದೆಗಳ ನೇಮಕಾತಿಗೆ ಒತ್ತಾಯಿಸಿ ಹರಿಹರದ ಪ್ರೊ.ಬಿ.ಕೃಷ್ಣಪ್ಪ ಸಮಾಧಿ ಮೈತ್ರಿವನ ದಿಂದ ಮಾ.12 ರಂದು ಆರಂಭಿಸಿರುವ ಪಾದಯಾತ್ರೆ ಭಾನುವಾರ ಚಿತ್ರದುರ್ಗಕ್ಕೆ ಆಗಮಿಸಿದ ವೇಳೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿರುವ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಿ ಮಾತನಾಡಿದರು. ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯ, ಔದ್ಯೋಗಿಕವಾಗಿ ಮಾದಿಗ ಸಮುದಾಯ ತೊಂದರೆ ಅನುಭವಿಸಿಕೊಂಡು ಬರುತ್ತಿದೆ. ಅದಕ್ಕಾಗಿ ಮಾಹಿತಿ ಸಂಗ್ರಹಿಸುವುದಕ್ಕಾಗಿ ರಚಿಸಿರುವ ಎಲ್ಲಾ ಆಯೋಗಗಳು ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿವೆ ಎಂಬ ವರದಿ ನೀಡಿದ್ದರೂ ಆಳುವ ಸರ್ಕಾರಗಳಿಗೆ ಕಣ್ಣು, ಕಿವಿ ಇಲ್ಲದಂತಾಗಿರುವುದರಿಂದ ಮಾದಿಗರ ಬದುಕು ದಿವಾಳಿಯಾಗಿದೆ. ಹಾಗಾಗಿ ಒಳ ಮೀಸಲಾತಿಯನ್ನು ಅನುಷ್ಠಾನಕ್ಕೆ ತರಬೇಕೆಂದು ಒತ್ತಾಯಿಸುವುದಕ್ಕಾಗಿ ಮುನ್ನೂರು ಕಿ.ಮೀ.ಪಾದಯಾತ್ರೆ ನಡೆಸಿ ಮಾ.26 ರಂದು ಬೆಂಗಳೂರು ತಲುಪಿ. ಮಾ.27ಕ್ಕೆ ಸ್ವಾತಂತ್ರ ಉದ್ಯಾನವನದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ಮಾದಿಗರಿಗೆ ಬಡ್ತಿ ಮೀಸಲಾತಿ ಬೇಕು. ಮಾದಿಗರ ಅನ್ನ ಕಸಿದಿರುವ ಸರ್ಕಾರ ಈಗ ತಟ್ಟೆಯನ್ನು ಕಿತ್ತುಕೊಂಡಿದೆ. ಇದರ ವಿರುದ್ದ ನಮ್ಮ ಹೋರಾಟ ಎಂದರು. ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಿ.ಹೆಚ್.ಮೋಹನ್ ಕುಮಾರ್ ಮಾತನಾಡಿ, ಮಾದಿಗರ ಬಗ್ಗೆ ಬದ್ದತೆ, ಕಾಳಜಿಯಿಟ್ಟು ಕೊಂಡಿರುವ ಶ್ರೀ ಷಡಾಕ್ಷರಮುನಿ ಸ್ವಾಮೀಜಿ ಒಳಮೀಸಲಾತಿ ಜಾರಿಗಾಗಿ ಹರಿಹರದಿಂದ ಬೆಂಗಳೂರಿಗೆ ಪಾದಯಾತ್ರೆ ಹೊರಟಿದ್ದಾರೆ. ಮಾ.12 ರಂದು ನಡೆಯಬೇಕಾಗಿದ್ದ ವಿಶೇಷ ಸಚಿವ ಸಂಪುಟ ಸಭೆಯನ್ನು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದೂಡಿದ್ದಾರೆ. ಮುಂದಿನ ಕ್ಯಾಬಿನೆಟ್ ಸಭೆಯಲ್ಲಿ ಒಳ ಮೀಸಲಾತಿಯನ್ನು ಜಾರಿಗೆ ತರಲೆಬೇಕು. ಯಾವುದೇ ಕಣ್ಣಾಮುಚ್ಚಾಲೆಯಾಟ ಆಡಬಾರದು. ಬಜೆಟ್‌ನಲ್ಲಿ ಮೀಸಲಿಟ್ಟಿರುವ ಎಸ್ಸಿಪಿ. ಟಿಎಸ್ಪಿ. ಹಣವನ್ನು ಗ್ಯಾರೆಂಟಿ ಯೋಜನೆಗಳಿಗೆ ಬಳಸಲಾಗಿದೆ. ದಲಿತರ ಅಭಿವೃದ್ದಿಗಾಗಿಯೇ ಮೀಸಲಾಗಿರುವ ಹಣವನ್ನು ಅನ್ಯ ಉದ್ದೇಶಕ್ಕೆ ವಿನಿಯೋಗಿಸಬಾರದು. ಒಂದು ವೇಳೆ ಒಳ ಮೀಸಲಾತಿ ಜಾರಿಗೆ ತರದಿದ್ದರೆ ಷಡಕ್ಷರಮುನಿ ಸ್ವಾಮೀಜಿಗಳ ನೇತೃತ್ವದಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದೆಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಬಿ.ಪಿ.ಪ್ರಕಾಶ್‌ಮೂರ್ತಿ, ಆರ್.ನರಸಿಂಹರಾಜು, ಬಿಜೆಪಿ ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಪರಶುರಾಮ್, ಕೆ.ಪಿ.ಶ್ರೀನಿವಾಸ್, ನಿವೃತ್ತ ಡಿಡಿಪಿಐ ರೇವಣಸಿದ್ದಪ್ಪ, ನಿವೃತ್ತ ಬಿಸಿಎಂ ಅಧಿಕಾರಿ ಜಗನ್ನಾಥ್, ಜಾನುಕೊಂಡ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ಮಂಜುಳ ಸ್ವಾಮಿ ಮತ್ತಿತರರು ಪಾದಯಾತ್ರೆಯಲ್ಲಿದ್ದರು.

# ಕವಿತಾಳವನ್ನು ತಾಲೂಕು ಕೇಂದ್ರವನ್ನಾಗಿ ಘೋಷಿಸಲು ಆಗ್ರಹ ಸಚಿವ ಬೋಸರಾಜು ಅವರಿಗೆ ಮನವಿ





❑ ನೈಜ್ಯ ದೆಸೆ ನ್ಯೂಸ್

**ಕವಿತಾಳ: ಕವಿತಾಳ ಪಟ್ಟಣವನ್ನು ತಾಲೂಕು ಕೇಂದ್ರವನ್ನಾಗಿ ಘೋಷಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಕವಿತಾಳ ತಾಲೂಕು ಹೋರಾಟ ಸಮಿತಿ ವತಿಯಿಂದ ಕರ್ನಾಟಕ ಸರ್ಕಾರದ ಸಣ್ಣ ನೀರಾವರಿ ಹಾಗೂ ವಿಜ್ಞಾನ–ತಂತ್ರಜ್ಞಾನ ಸಚಿವರಾದ N. S. Boseraju ಅವರನ್ನು Raichur ನಗರದ ಅವರ ನಿವಾಸದಲ್ಲಿ ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಲಾಯಿತು.**

ಕಲ್ಮಠ ಶ್ರೀಗಳ ನೇತೃತ್ವದಲ್ಲಿ ನಡೆದ ಈ ಭೇಟಿಯಲ್ಲಿ ಕವಿತಾಳ ಪಟ್ಟಣವನ್ನು ತಾಲೂಕು ಕೇಂದ್ರವನ್ನಾಗಿ ಘೋಷಿಸುವ ಅಗತ್ಯತೆ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು. ಕವಿತಾಳ ಸುತ್ತಮುತ್ತಲಿನ ಅನೇಕ ಗ್ರಾಮಗಳ ಜನರು ಆಡಳಿತಾತ್ಮಕ ಕೆಲಸಗಳಿಗಾಗಿ ದೂರದ ಊರುಗಳಿಗೆ ತೆರಳಬೇಕಾದ ಪರಿಸ್ಥಿತಿ ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಕವಿತಾಳವನ್ನು ತಾಲೂಕು ಕೇಂದ್ರವನ್ನಾಗಿ ಘೋಷಿಸಿದರೆ ಜನರಿಗೆ ಹೆಚ್ಚಿನ ಸೌಲಭ್ಯ ದೊರೆಯಲಿದೆ ಎಂದು ಪ್ರತಿನಿಧಿಗಳು ಸಚಿವರಿಗೆ ವಿವರಿಸಿದರು.

ಇದರ ಜೊತೆಗೆ ಪಟ್ಟಣದ ಸಮಗ್ರ ಅಭಿವೃದ್ಧಿ, ಮೂಲಭೂತ ಸೌಲಭ್ಯಗಳ ವೃದ್ಧಿ, ರಸ್ತೆ ಸುಧಾರಣೆ, ಕುಡಿಯುವ ನೀರು ಸೇರಿದಂತೆ ಹಲವು ಸಾರ್ವಜನಿಕ ಸಮಸ್ಯೆಗಳ ಕುರಿತು ಸಹ ಸಚಿವರ ಗಮನಕ್ಕೆ ತರಲಾಯಿತು. ಮನವಿ ಸ್ವೀಕರಿಸಿದ ಸಚಿವರು ವಿಷಯವನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಪಟ್ಟಣದ ಪ್ರಮುಖ ಮುಖಂಡರು, ಯುವಕರು ಹಾಗೂ ಕವಿತಾಳ ತಾಲೂಕು ಹೋರಾಟ ಸಮಿತಿಯ ಸದಸ್ಯರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸಿಂಧನೂರು ಕೇಂದ್ರ ಬಸ್ ನಿಲ್ದಾಣದ ಮುಂದೆ ಓರ್ವ ಮಹಿಳೆಗೆ ಬಸ್ ಡಿಕ್ಕಿ ಸ್ಥಳದಲ್ಲೇ ಸಾವು! ಛಿದ್ರವಾದ ದೇಹ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಕೇಂದ್ರ ಬಸ್ ನಿಲ್ದಾಣದ ಒಳಗೆ ಬರುವ ಸ್ಥಳದಲ್ಲಿಯೇ ಓರ್ವ ಮಹಿಳೆಗೆ ಸರ್ಕಾರಿ ಬಸ್ ಡಿಕ್ಕಿ ಒಡೆದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿದ್ದಾಳೆ ಬಸ್ಸಿನ ಗಾಲಿಗೆ ಸಿಲುಕಿ ಮಹಿಳೆ ದೇಹವು ಛಿದ್ರವಾಗಿದೆ. ಕಾರಟಗಿ ತಾಲೂಕಿನ ಬೆವಿನಾಳ ಗ್ರಾಮದ ಈರಮ್ಮ (38) ಗಂ.ಬಸಣ್ಣ ಎಂದು ತಿಳಿದು ಬಂದಿದೆ.**




ರಾಯಚೂರಿನಿಂದ ಬಳ್ಳಾರಿಗೆ ತೆರಳುವ ಬಸ್ ನಂ– (ಕೆ.ಎ.361415) ಡಿಕ್ಕಿ ಒಡೆದಿದೆ. ಚಾಲಕ ಹುಲುಗಪ್ಪ ಎಂದು ತಿಳಿದು ಬಂದಿದೆ. ಮೃತ ದೇಹವನ್ನು ಸಂಚಾರಿ ಪಿಎಸ್‌ಐ ಚಂದ್ರಶೇಖರ ಸಿಬ್ಬಂದಿಗಳೊಂದಿಗೆ ನಗರದ ಸಾರ್ವಜನಿಕ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ಕಳಿಸಿ ಕೊಡಲಾಯಿತು. ಘಟನೆ ನಡೆದ ಜಾಗದ ಪಕ್ಕದಲ್ಲೇ ಒಂದು ಬದಿಯಲ್ಲಿ ಆಟೋ ರಿಕ್ಷಾಗಳು, ಇನ್ನೊಂದು ಬದಿಯಲ್ಲಿ ಬಂಡಿಗಳ ನಿಲುಗಡೆಯಿಂದಾಗಿ ಬಸ್ ಸಂಚಾರಕ್ಕೆ ಅಡ್ಡಿಯಾಗಿ ರಸ್ತೆ ಇಕ್ಕಟ್ಟಾಗಿ ಹೋಗಿದೆ ಇದರಿಂದಾಗಿ ಇಂತಹ ಅವಘಡಗಳು ಇಲ್ಲಿ ತುಂಬಾ ಆಗುತ್ತಿವೆ ಎಂಬುದು ಸಾರ್ವಜನಿಕರ ಮಾತು.

ಈ ಮುಂಚೆ ಇದೇ ಸ್ಥಳದಲ್ಲಿ ವಿರುಪಾಪುರದ ವ್ಯಕ್ತಿಯೊಬ್ಬರು ಅದೇ ರೀತಿಯಲ್ಲಿ ಸಾವನ್ನಪ್ಪಿದ್ದ, ಇಕ್ಕಟ್ಟಾದ ರಸ್ತೆ ಅಗಲು ಮಾಡಲು ಪೊಲೀಸರು ಮುಂದಾಗಬೇಕು ಎಂಬುದು ಸಾರ್ವಜನಿಕರ ಆಗ್ರಹವಾಗಿದೆ. ಪರೀಕ್ಷೆ ನಡೆಸಲು ಕುಟುಂಬಸ್ಥರಿಗೆ ಮಾಹಿತಿ ನೀಡಿದ್ದಾರೆ. ಸಾರ್ವಜನಿಕರ ನೂಕು ನುಗ್ಗಲು ನಿಂದಾಗಿ ಸಂಚಾರವು ಕೆಲವೊತ್ತು ಅಸ್ತವ್ಯಸ್ತವಾಗಿತ್ತು.

# ಬಡವರೊಟ್ಟಿಗೆ ರಂಜಾನ್ ಹಬ್ಬ ಆಚರಿಸುವುದೇ ನನ್ನ ಧ್ಯೇಯ! ರಂಜಾನ್ ಕಿಟ್ ವಿತರಣಾ ಕಾರ್ಯಕ್ರಮದಲ್ಲಿ ಜನಾಬ ಅಯ್ಯುಬ ಮನಿಯಾರ್ ಅಭಿಮತ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಯಾವುದೇ ಹಬ್ಬವಾಗಿರಲಿ ಅದು ಕೇವಲ ಸ್ಥಿತಿವಂತರ ಹಬ್ಬವಾಗಿರುವುದಲ್ಲದೆ ಸಮಾಜದಲ್ಲಿ ಬಡವರು ಹಾಗೂ ಸ್ಥಿತಿವಂತರು ಒಟ್ಟಿಗೆ ಸರಿಸಮಾನವಾಗಿ ಹಬ್ಬವನ್ನು ಆಚರಿಸುವುದು ನಿಜವಾದ ಹಬ್ಬದ ಆಚರಣೆಯಾಗುತ್ತದೆ. ರಂಜಾನ್ ತಿಂಗಳು ನಮಗೆ ತ್ಯಾಗ,ಬಲಿದಾನ ಮತ್ತು ಸಮಾಜಸೇವೆಯ ಸಂದೇಶವನ್ನು ನೀಡುತ್ತೆ ಎಂದು ಮುದ್ದೇಬಿಹಾಳ ನಗರದ ಖ್ಯಾತ ಉದ್ಯಮಿದಾರರು ಹಾಗೂ ಸಮಾಜಸೇವಕರೂ ಆದ ಜನಾಬ ಅಯ್ಯುಬ ಮನಿಯಾರ್ ಅಭಿಪ್ರಾಯ ವ್ಯಕ್ತಪಡಿದರು.**





ನಗರದ ಮಸ್ಜಿದೆ–ಆಲಾ ಸಭಾಂಗಣದಲ್ಲಿ ಈದ್ ಕಿಟ್ ವಿತರಣಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ 100 ಕುಟುಂಬಗಳಿಗೆ ಈದ್ ಕಿಟ್ ಗಳನ್ನು ವಿತರಿಸಿ ಮಾತನಾಡಿದ ಅವರು ನನ್ನ ಉದ್ದೇಶ ಕೇವಲ ಬಡವರಿಗೆ ಕಿಟ್ ನೀಡುವುದಲ್ಲದೇ ಬದಲಾಗಿ ಅವರೊಂದಿಗೆ ಭೇಟಿಯಾಗಿ ಕುಶಲೋಪರಿಯನ್ನು ವಿಚಾರಿಸಿ ನನ್ನ ಕೈಲಾದಷ್ಟು ಸಹಾಯ ಮಾಡಿದರೆ ಮಾತ್ರ ನನಗೆ ಹಬ್ಬ ಆಚರಿಸಲಿಕ್ಕೆ ಸಂತೋಷವಾಗುತ್ತದೆ ಎಂದು ನುಡಿದ ಅವರು ಬಡವರೊಟ್ಟಿಗೆ ರಂಜಾನ್ ಹಬ್ಬವನ್ನು ಆಚರಿಸುವುದೇ ನನ್ನ ಧ್ಯೇಯವಾಗಿದೆ ಎಂದರು. ಇದೇ ಸಂದರ್ಭದಲ್ಲಿ ಪ್ರಾಸ್ತಾವಿಕವಾಗಿ ಶಿಕ್ಷಕರಾದ ಜನಾಬ ಮೊಹಮ್ಮದ್ ಖಾಸಿಂ ನಮಾಜಕಟ್ಟಿ ಮಾತನಾಡಿ ಅಯ್ಯುಬ ಮನಿಯಾರ ರವರು ಸಮಾಜ ಸೇವೆಯ ಭಾಗವಾಗಿ ಬಡ ಹಾಗೂ ಅಗತ್ಯವಿರುವ ಕುಟುಂಬಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಕಳೆದ 28 ವರ್ಷಗಳಿಂದ ನಿರಂತರವಾಗಿ ಈದ್ ಕಿಟ್ ವಿತರಣಾ ಕಾರ್ಯಕ್ರಮವನ್ನು ನಡೆಸುತ್ತಾ ಬಂದಿದ್ದಾರೆ.

ಪ್ರತಿ ವರ್ಷ ತಾಳಿಕೋಟಿ ಅಲ್ಲದೆ ನಾಲತವಾಡ ಮುದ್ದೇಬಿಹಾಳ ಹಾಗೂ ಸುತ್ತಮುತ್ತಲಿನ ಗ್ರಾಮದಲ್ಲಿ ರಮಝಾನ್ ತಿಂಗಳ ಸಂದರ್ಭದಲ್ಲಿ ಬಡವರು ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಅಗತ್ಯವಾದ ಆಹಾರ ಸಾಮಗ್ರಿಗಳನ್ನೊಳಗೊಂಡ ಈದ್ ಕಿಟ್‌ಗಳನ್ನು ವಿತರಿಸುವ ಮೂಲಕ ಅವರು ಮಾನವೀಯ ಸೇವೆಯನ್ನು ಮಾಡುತ್ತಿದ್ದಾರೆ ಅವರ ಈ ನಿಸ್ವಾರ್ಥ ಸೇವೆಗೆ ಜಮಾತೆ ಇಸ್ಲಾಮೀ ಹಿಂದ್ ನಗರ ಘಟಕವು ಸಹಕರಿಸುತ್ತದೆ. 1998 ರಲ್ಲಿ ಪ್ರಥಮವಾಗಿ ಪ್ರಾರಂಭಿಸಿದಾಗ ಅಂದು 14 ಕಿಟ್ ಗಳಿಂದ ಪ್ರಾರಂಭವಾದ ಈ ಸೇವೆ ಇಂದು 800 ಕುಟುಂಬಗಳಿಗೆ ರಂಜಾನ್ ಹಬ್ಬವನ್ನು ಆಚರಿಸಲು ಸಹಾಯ ಮಾಡುತ್ತಿದೆ ಎಂದರು.

ತಾಳಿಕೋಟಿ ನಾಲತವಾಡ ಹಾಗೂ ಮುದ್ದೇಬಿಹಾಳ ಪಟ್ಟಣಗಳಲ್ಲಿ ಜಾತಿ ಮತ್ತು ಮತಭೇದವಿಲ್ಲದೆ ನಿಸ್ವಾರ್ಥವಾಗಿ ಉಚಿತ ಕಣ್ಣಿನ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸೆ, ವಿಧವಾ ಮಾಸಿಕ ಪಿಂಚಣಿ , ಎಲ್ಲಾ ಹಬ್ಬಗಳ ಸಮಯದಲ್ಲಿ ಆಯಾ ಸಮುದಾಯದ ಬಡವರಿಗೆ ಉಡುಗೊರೆಗಳನ್ನು ಕೊಡುವ ಮುಖಾಂತರ ಹಲವಾರು ಸಮಾಜ ಸೇವೆಗಳನ್ನು ಜನಾಬ ಅಯ್ಯುಬ ಮನಿಯಾರ ರವರು ಮಾಡುತ್ತಾ ಬಂದಿದ್ದಾರೆ ಎಂದರು. ಜನಾಬ್ ಅಯ್ಯುಬ ಮನಿಯಾರ್ ಅವರ ಈ ಮಾನವೀಯ ಸೇವೆಯನ್ನು ಸ್ಥಳೀಯರು ಹಾಗೂ ಸಮಾಜದ ಮುಖಂಡರು ಶ್ಲಾಘಿಸಿದ್ದಾರೆ. ದೀರ್ಘಕಾಲದಿಂದ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿರುವುದು ಯುವಕರಿಗೆ ಪ್ರೇರಣೆಯಾಗಿದ್ದು, ಇಂತಹ ಸೇವಾ ಕಾರ್ಯಕ್ರಮಗಳು ಸಮಾಜದಲ್ಲಿ ಸಹಕಾರ ಮತ್ತು ಸಹಾನುಭೂತಿಯ ಮನೋಭಾವವನ್ನು ಹೆಚ್ಚಿಸುವುದಾಗಿ ಅವರು ಅಭಿಪ್ರಾಯಪಟ್ಟಿದ್ದಾರೆ.

ಈ ಸಂದರ್ಭದಲ್ಲಿ ಗಣ್ಯರಾದ ಇಂಜಿನಿಯರ ಮುರ್ತುಜಾ ಮ್ಹೇತ್ರಿ ಜನಾಬ ಇಬ್ರಾಹಿಮ್ ಸಾಬ ಆರ್ಬೋಳ, ಹಬೀಬಸಾಬ ಮಾನ್ವಿ, ಖುತ್ಬುದ್ದಿನ ಮೋಮಿನ್, ಮಹಿಬೂಬ ಯಕೀನ, ಪತ್ರಕರ್ತರಾದ ರಾಜೇಶ್ ಇನಾಮದಾರ, ಜನಾಬ ಎಲ್.ಎಚ್. ಮಮದಾಪೂರ, ಜನಾಬ ಆಫ್ತಾಬ ಮನಿಯಾರ, ಬಾಬಾ ಯಕೀನ ಹಾಗೂ ಜಮಾತೆ ಇಸ್ಲಾಮಿ ಹಿಂದ್ ತಾಳಿಕೋಟಿಯ ಕಾರ್ಯಕರ್ತರು ಉಪಸ್ಥಿತರಿದ್ದರು. ಶಿಕ್ಷಕರಾದ ಇರ್ಫಾನ್ ಕಾಜಿ ಕುರ್ ಆನ್ ಪಠಿಸಿದರು ಇಲಿಯಾಸ ಚೌದ್ರಿ ನಿರೂಪಿಸಿದರು ಮುಜಾಹಿದ್ ನಮಾಜಕಟ್ಟಿ ವಂದಿಸಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಎಂ. ಎಸ್ ಶಲ್ಯ ತಂತ್ರ (MS Shalya Tantra)

ಮೆಟಲರ್ಜಿಕಲ್ ಇಂಜಿನಿಯರಿಂಗ್ (Metallurgical Engineering) ಎಂಬುದು ಲೋಹಗಳ ಹೊರತೆಗೆಯುವಿಕೆ, ಸಂಸ್ಕರಣೆ ಮತ್ತು ಗುಣಲಕ್ಷಣಗಳನ್ನು ಅಧ್ಯಯನ ಮಾಡುವ 4 ವರ್ಷಗಳ (8 ಸೆಮಿಸ್ಟರ್‌ಗಳು) ಪದವಿ ಕೋರ್ಸ್ ಆಗಿದೆ. ಇದು ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಗಣಿತ (PCM) ಒಳಗೊಂಡ 10+2 ವಿದ್ಯಾರ್ಹತೆಯನ್ನು ಬಯಸುತ್ತದೆ. ಮತ್ತು ಖಋಒಖ ಖಣಣಜುಜ ಪ್ರಕಾರ, ಇದು ಉತ್ಪಾದನೆ, ವೈಮಾನಿಕ, ಮತ್ತು ಶಕ್ತಿ ಕ್ಷೇತ್ರಗಳಲ್ಲಿ ಉತ್ತಮ ಉದ್ಯೋಗಾವಕಾಶಗಳನ್ನು ನೀಡುತ್ತದೆ. ಮೆಟಲರ್ಜಿ ಇಂಜಿನಿಯರಿಂಗ್ ಕೋರ್ಸ್ ವಿವರಗಳು (Kannada): ಕೋರ್ಸ್ ಹೆಸರು: B.E./B.Tech in Metallurgical Engineering. ಅವಧಿ: 4 ವರ್ಷಗಳು (8 ಸೆಮಿಸ್ಟರ್‌ಗಳು). ಅರ್ಹತೆ: 10+2 (PUC) ನಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಗಣಿತ. ಪ್ರಮುಖ ವಿಷಯಗಳು: ಹೊರತೆಗೆಯುವ ಮೆಟಲರ್ಜಿ (Extractive Metallurgy), ಭೌತಿಕ ಮೆಟಲರ್ಜಿ (Physical Metallurgy), ಲೋಹಶಾಸ್ತ್ರ (Metallography), ಮತ್ತು ವಸ್ತುಗಳ ಗುಣಲಕ್ಷಣಗಳು. ಕೆಲಸದ ಕ್ಷೇತ್ರಗಳು: ಸ್ಟೀಲ್ ಪ್ಲಾಂಟ್‌ಗಳು, ಆಟೋಮೊಬೈಲ್, ಏರೋಸ್ಪೇಸ್, ಮತ್ತು ಸಂಶೋಧನಾ ಸಂಸ್ಥೆಗಳು. ವೇತನ: ಆರಂಭಿಕ ಸಂಬಳ ವಾರ್ಷಿಕವಾಗಿ ಸರಾಸರಿ 1.7 ಲಕ್ಷದಿಂದ ?5.5 ಲಕ್ಷದವರೆಗೆ ಇರಬಹುದು. ಮುಖ್ಯ ಉದ್ಯೋಗಾವಕಾಶಗಳು: ಮೆಟಲರ್ಜಿಸ್ಟ್ (Metallurgist). ವೆಲ್ಡಿಂಗ್ ಇಂಜಿನಿಯರ್. ಕ್ವಾಲಿಟಿ ಕಂಟ್ರೋಲ್ ಇಂಜಿನಿಯರ್.

# ಬಹುಮಾನ ಮುಖ್ಯವಲ್ಲ ಪರೀಕ್ಷೆಯಲ್ಲಿ ಪಾಲ್ಗೊಳ್ಳುವಿಕೆ ಬಹು ಮುಖ್ಯ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರ: ನಿರಂತರ ಮಕ್ಕಳ ಸ್ವರ್ಧಾತ್ಮಕ ಪರೀಕ್ಷೆಯಲ್ಲಿ ಪಾಲ್ಗೊಂಡು ಪರೀಕ್ಷೆಯಲ್ಲಿ ಉತ್ತೀರ್ಣರಾಗುವದು ಮುಖ್ಯವಲ್ಲ ಪರೀಕ್ಷೆಯಲ್ಲಿ ಪಾಲ್ಗೊಳ್ಳುವುದು ಬಹು ಮುಖ್ಯ ಮಕ್ಕಳ ಭೌತಿಕ,ಮಾನಸಿಕ, ಖಿನ್ನತೆಯಿಂದ ಹೊರಬರಲು ಇಂತಹ ಪರೀಕ್ಷೆ ಬಹು ಮುಖ್ಯವಾಗಿದೆ ಎಂದು ನ್ಯೂಸ್ 18 ವರದಿಗಾರ ವಿಶ್ವನಾಥ್ ಹೂಗಾರ್ ಹೇಳಿದರು ಪಟ್ಟಣದ ಜ್ಞಾನಾಮೃತ ಪಬ್ಲಿಕ್ ಶಾಲೆಯಲ್ಲಿ ರವಿವಾರ ನಡೆದ 2025-26 ನೇ ಸಾಲಿನ ವಿದ್ಯಾರ್ಥಿಗಳಿಂದ 4 ರಿಂದ 9 ನೇ ತರಗತಿವರೆಗೆ ಟ್ಯಾಲೆಂಟ್ ಅವಾರ್ಡ್, ಹಾಗೂ ಬೇಸಿಗೆ ಶಿಬಿರ ಸೇರಿದಂತೆ ನಿರಂತರ ಕಲಿಕೆಗಾಗಿ ಮಕ್ಕಳನ್ನು ಉತ್ತೇಜಿಸುವ ಈ ಒಂದು ಸ್ವರ್ಧಾತ್ಮಕ ಪರೀಕ್ಷೆ ಬಹು ಸರಳತೆಯಿಂದ ಈ ಪರೀಕ್ಷೆ ಬರೆದಿದ್ದು, ಟ್ಯಾಲೆಂಟ್ ಅವಾರ್ಡ್ ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ಶ್ರೀ ಮುರುಘಂದ್ರ ಶಿವಯೋಗಿಗಳು ಶ್ರೀ ಸಿದ್ದರಾಮೇಶ್ವರ ಗುರುಮಠ ಸುಕ್ಷೇತ್ರ ಯರಡೋಣ ರವರು ಕಾರ್ಯಕ್ರಮವನ್ನು ಉದ್ಘಾಟಿಸಿ.**

ನಂತರ ಮಾತನಾಡಿದ ಅವರು ತಾಲೂಕಿನ ಇಂತಹ ಪರೀಕ್ಷೆಯನ್ನು



ನಡೆಸುತ್ತಿರುವ ಜ್ಞಾನಾಮೃತ ಪಬ್ಲಿಕ್ ಶಾಲೆ , ನಿಜಕ್ಕೂ ಶ್ಲಾಘನೀಯ. ಪರೀಕ್ಷೆಯಲ್ಲಿ ಪಾಲ್ಗೊಳ್ಳುವಿಕೆ ಬಹು ಮುಖ್ಯವಾಗಿದ್ದು ಪಾಲಕರು ತಮ್ಮ ಮಕ್ಕಳನ್ನ ಈ ಪರೀಕ್ಷೆಯಲ್ಲಿ ತಮ್ಮ ಜ್ಞಾನಾರ್ಜನೆಗೆ ಕಳಿಸಿದ್ದು ಬಹಳ ಹೆಮ್ಮೆಯ ವಿಷಯವೆಂದು ಅವರು ಹೇಳಿದರು. ಮಕ್ಕಳ ಪ್ರವೇಶ ಪರೀಕ್ಷೆಯಲ್ಲಿ 4-ರಿಂದ 9 ನೇ ತರಗತಿ ವಿದ್ಯಾರ್ಥಿಗಳು ಈ ಟ್ಯಾಲೆಂಟ್ ಅವಾರ್ಡ್ ಪರೀಕ್ಷೆಯಲ್ಲಿ ಸುಮಾರು 450 ಜನ ವಿದ್ಯಾರ್ಥಿಗಳು ಹಾಜರಾಗಿದ್ದು ಇದರಲ್ಲಿ 4 ನೇ ತರಗತಿಯಿಂದ 6 ನೇ ತರಗತಿ ವಿದ್ಯಾರ್ಥಿಗಳಲ್ಲಿ ಟಾಪ್ 10 ವಿದ್ಯಾರ್ಥಿಗಳ ಹತ್ತು ಜನ ವಿದ್ಯಾರ್ಥಿಗಳು ಆಯ್ಕೆಯಾಗಿದ್ದು, 7 ನೇ ತರಗತಿಯಿಂದ 9 ನೇ ತರಗತಿಯ ವಿದ್ಯಾರ್ಥಿಗಳಲ್ಲಿ ಟಾಪ್ ಟೆನ್ ವಿದ್ಯಾರ್ಥಿಗಳು ಆಯ್ಕೆಯಾಗಿದ್ದು. ಅದರಲ್ಲಿ ಪ್ರಥ-'ಮ ದ್ವಿತೀಯ ತೃತೀಯ ವಿದ್ಯಾರ್ಥಿಗಳಿಗೆ ನಗದು ಬಹುಮಾನವನ್ನು ವಿತರಿಸಿದ್ದು. 5 ನೇ ತರಗತಿ ವಿದ್ಯಾರ್ಥಿಗಳಾದ ತನುಶ್ರೀ ಪವಾರ್. ಪ್ರಥಮ ಬಹುಮಾನ ಪಡೆದಿದ್ದು. ಪ್ರದೀಪ್ ರಾಮಪ್ಪ, ದ್ವಿತೀಯ ಬಹುಮಾನ ಪಡೆದಿದ್ದು. ದ್ವಿತೀಯ ಬಹುಮಾನವನ್ನು ತನ್ವಯ ಗವಿಸಿದ್ದೇಶ್ವರ. ತೃತೀಯ ಬಹುಮಾನವನ್ನು ಪಡೆದಿದ್ದಾರೆ. 8 ನೇ ತರಗತಿ ವಿದ್ಯಾರ್ಥಿಯಾದ ಅನನ್ಯ ಚವಾಣ್ ಪ್ರಥಮ ಪ್ರವಮಾನ ಪಡೆದದ್ದು. ದ್ವಿತೀಯ ಬಹುಮಾನವನ್ನು 9 ನೇ ತರಗತಿ ವಿದ್ಯಾರ್ಥಿ ಬಸಲಿಂಗಮ್ಮ ಪಡೆದಿದ್ದು. ತೃತೀಯ ಬಹುಮಾನ ಸದಾನಂದ ಪ್ರಕಾಶ್ ಪಡೆದಿದ್ದು. ಉಳಿದ ವಿದ್ಯಾರ್ಥಿಗಳಿಗೆ ಸಮಾಧಾನಕರ ಬಹುಮಾನವನ್ನ ಶಾಲೆಯ ಆಡಳಿತ ಮಂಡಳಿ ನೀಡಿದೆ. ಮತ್ತು ನಿರಂತರ ವಿದ್ಯಾರ್ಥಿಗಳ ಪ್ರವೇಶ ರೀತಿಯಲ್ಲಿ ಟಾಪ್ ಟೆನ್ ವಿದ್ಯಾರ್ಥಿಗಳ ಶೇಕಡ 10% ವಿನಾಯಿತಿ ನೀಡಲಾಗುವುದೆಂದು ಸಂಗೀತ ಎಂ ಮಾಟೂರು ಮುಖ್ಯೋಪಾಧ್ಯಾಯರು ಜ್ಞಾನಾಮೃತ ಪಬ್ಲಿಕ್ ಶಾಲೆ ರವರು ಹೇಳಿದರು.

ಪ್ರಸ್ತಾವಿಕವಾಗಿ ವೀರೇಶ್ ಗೌಡರು ಮಾತನಾಡಿ ಈ ಶಾಲೆಯ ವೈಶಿಷ್ಟತೆ ತಾಲೂಕಿನಲ್ಲಿ ಹೆಮ್ಮರವಾಗಿ ಬೆಳೆಯಲು ಸಹಕರಿಸುತ್ತಿರುವ ತಾಲೂಕಿನ ಪ್ರತಿಯೊಬ್ಬ ಪಾಲಕರ ಹಾಗೂ ವಿದ್ಯಾರ್ಥಿಗಳ ಸಹಕಾರ ಅತ್ಯಗತ್ಯ ಇದೆ ಎಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ ಶರಣಪ್ಪ ಸಿ ನಿವೃತ್ತ ಪ್ರಾಚಾರ್ಯರು ಹಾಗೂ ಆಡಳಿತ ಅಧಿಕಾರಿ ವಿಸಿಬಿ ಕಾಲೇಜ್ ಲಿಂಗಸಗೂರ. ಶಾಲೆಯ ಅಧ್ಯಕ್ಷೆ ನೀಲಮ್ಮ ಸೂಗಪ್ಪ ಅಂಗಡಿ. ವಿನಯ್ ಕುಮಾರ್ ಗಣಾಚಾರಿ ಉಮಾಮಹೇಶ್ವರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು, ಕಾರ್ಯಕ್ರಮದ ನಿರೂಪಣೆಯನ್ನು ಚಿದಾನಂದ ಶಿಕ್ಷಕರು ಲಿಂಗಸಗೂರ ನೆರವೇರಿಸಿದರು.

# ಮಾ.18ರಿಂದ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗಳು ಆರಂಭ: ಚಂದ್ರಶೇಖರ.ಡಿ.

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ., ತಾಲೂಕಿನಲ್ಲಿ 2025?26ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗಳು ಮಾ.18ರಿಂದ ಬೆಳಿಗ್ಗೆ 10 ಗಂಟೆಗೆ ಪ್ರಾರಂಭಗೊಳ್ಳಲಿದ್ದು, ವಿದ್ಯಾರ್ಥಿಗಳು ಮುಕ್ತವಾಗಿ ಪರೀಕ್ಷೆಗಳನ್ನು ಬರೆಯಲು ಶಿಕ್ಷಣ ಇಲಾಖೆಯಿಂದ ಅಗತ್ಯವಾದ ಎಲ್ಲಾ**



**ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.**

ಅಖಂಡ ಮಾನವಿ ತಾಲೂಕಿನಲ್ಲಿ ಈ ಬಾರಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ 5141 ವಿದ್ಯಾರ್ಥಿಗಳು ಹೊಸದಾಗಿ ನೋಂದಾಯಿಸಿಕೊಂಡಿದ್ದು, ಖಾಸಗಿ ಹಾಗೂ ಪುನರಾವರ್ತಿತ ಅಭ್ಯರ್ಥಿಗಳಾಗಿ 874 ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಒಟ್ಟು 6015 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಮಾಹಿತಿ ನೀಡಿದರು. ತಾಲೂಕಿನಲ್ಲಿ ಒಟ್ಟು 20 ಪರೀಕ್ಷಾ ಕೇಂದ್ರಗಳನ್ನು ರಚಿಸಲಾಗಿದ್ದು, 20 ಮುಖ್ಯ ಅಧೀಕ್ಷಕರು, 4 ಉಪ ಮುಖ್ಯ ಅಧೀಕ್ಷಕರು, 20 ಪ್ರಶ್ನೆಪತ್ರಿಕೆ ಅಭಿರಕ್ಷಕರು,

20 ಸ್ಥಾನಿಕ ಜಾಗೃತದಳ ಅಧಿಕಾರಿಗಳು ಹಾಗೂ 7 ಮಾರ್ಗಾಧಿಕಾರಿಗಳು ಕಾರ್ಯನಿರ್ವಹಿಸಲಿದ್ದಾರೆ. ಪರೀಕ್ಷಾ ಕೇಂದ್ರಗಳ ಸುತ್ತ ನಕಲು ತಡೆಯಲು ಸೂಕ್ತ ಕ್ರಮ ಕೈಗೊಂಡಿದ್ದು, ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಪರೀಕ್ಷೆಗಳು ಸಿ.ಸಿ.ಟಿ.ವಿ ಕಣ್ಗಾವಲಿನಲ್ಲಿ ನಡೆಯಲಿವೆ ಎಂದು ತಿಳಿಸಿದರು.

# ಡಿಸಿ, ಎಡಿಸಿ ಸಹಿ ದುರ್ಬಳಕೆ 6 ಮಂದಿ ನೌಕರರ ವಿರುದ್ಧ ದೂರು

❑ ನೈಜ್ಯ ದೆಸೆ ನ್ಯೂಸ್

**ಚಿತ್ರದುರ್ಗ: ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿಗಳ ಸಹಿ ಫೋರ್ಜರಿ ಮಾಡಿ ಜಿಲ್ಲಾ ಖಜಾನೆಗೆ 15 ಲಕ್ಷ ರೂ. ಮೊತ್ತದ ಬಿಲ್‌ಗಳನ್ನು ಸಲ್ಲಿಸಿದ್ದ ನಗರಾಭಿವೃದ್ಧಿ ಕೋಶದಲ್ಲಿ ಕಾರ್ಯನಿರ್ವಹಿಸುವ 6 ಮಂದಿ ನೌಕರರನ್ನು ಬಂಧಿಸಲಾಗಿದೆ. ನಗರಾಭಿವೃದ್ಧಿ ಕೋಶದ ನಿರ್ದೇಶಕಿ ರೇಷ್ಮಾ ಹಾನಗಲ್ ಈ ಸಂಬಂಧ ಚಿತ್ರದುರ್ಗ ನಗರ ಪೊಲೀಸ್ ಠಾಣೆಯಲ್ಲಿ ಶುಕ್ರವಾರ ದೂರು ದಾಖಲಿಸಿದ್ದು, ಪೊಲೀಸರು ಕ್ರಮ ಕೈಗೊಂಡಿದ್ದಾರೆ.**




ನಗರಾಭಿವೃದ್ಧಿ ಕೋಶದಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿದ್ದ ಸೈಯದ್ ಸಾಧಿಕ್, ವಿಜಯಕುಮಾರ್, ವಿನಯ್ ಶರ್ಮಾ, ಬಸವರಾಜ್, ಮೆಹಬೂಬ್ ಭಾಷಾ ಹಾಗೂ ವೆಂಕಟೇಶ್ ಅವರ ವಿರುದ್ಧ ದೂರು ದಾಖಲಾಗಿತ್ತು. ಮಾರ್ಚ್ 12 ರಂದು ಬೆಳಗ್ಗೆ 6.15 ರ ಸುಮಾರಿಗೆ ನಗರಾಭಿವೃದ್ಧಿ ಕೋಶದ ಸಿಬ್ಬಂಧಿ ಸೈಯದ್ ಸಾಧಿಕ್ ಜಿಲ್ಲಾಧಿಕಾರಿ ಕಚೇರಿಗೆ ಅಕ್ರಮ ಪ್ರವೇಶ ಮಾಡಿ, ಸಿಬ್ಬಂದಿಗೆ ವೇತನ ಪಾವತಿ ಮಾಡಲು ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿಗಳು ಬಳಸುತ್ತಿದ್ದ ಡಿಜಿಟಲ್ ಸಹಿಯ ಕೀಗಳನ್ನು ಕಳವು ಮಾಡಿರುವುದು ಸಿಸಿ ಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ. ವೇತನ ಪಾವತಿಗೆ ಸಂಬಂಧಿಸಿದ 15 ಲಕ್ಷ ರೂ. ಮೊತ್ತದ ಬಿಲ್ ತಯಾರಿಸಿ, ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿಗಳ ನಕಲಿ ಸಹಿ ಮಾಡಿರುವ ಆರೋಪಿಗಳು, ಇದನ್ನು ಜಿಲ್ಲಾ ಖಜಾನೆಗೆ ಸಲ್ಲಿಸಿದ್ದಾರೆ. ಖಜಾನೆ ಇಲಾಖೆ ಉಪನಿರ್ದೇಶಕರು ಸಹಿ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿ ಜಿಲ್ಲಾಧಿಕಾರಿ ಕಚೇರಿಗೆ ಮಾಹಿತಿ ನೀಡಿದಾಗ ಈ ಪ್ರಕರಣ ಬೆಳಕಿಗೆ ಬಂದಿದೆ.

# ಖಾಲಿ ಸರ್ಕಾರಿ ಹುದ್ದೆಗಳ ಭರ್ತಿಗೆ ಆಗ್ರಹಿಸಿ ಮುದ್ದೇಬಿಹಾಳದಲ್ಲಿ ಯುವ ಅಧಿವೇಶನ

❑ ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ವಿವಿಧ ಇಲಾಖೆಗಳಲ್ಲಿನ ಖಾಲಿ ಸರ್ಕಾರಿ ಹುದ್ದೆಗಳನ್ನು ತಕ್ಷಣವೇ ಭರ್ತಿ ಮಾಡಿ ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ತರಬೇಕೆಂದು ಆಗ್ರಹಿಸಿ ಸೋಮವಾರ ಪಟ್ಟಣದ ತಹಶೀಲ್ದಾರ್ ಕಚೇರಿ ಎದುರು ಉದ್ಯೋಗಾಕಾಂಕ್ಷಿ ಯುವಕರು ಹಾಗೂ ಜನಸಾಮಾನ್ಯರ ವೇದಿಕೆಯ ಕಾರ್ಯಕರ್ತರು ಯುವ ಅಧಿವೇಶನ ನಡೆಸಿದರು.**

ವಿವಿಧ ಭಾಗಗಳಿಂದ ಆಗಮಿಸಿದ್ದ ಯುವಕರು ಹಾಗೂ ಚಿಂತಕರು ಅಧಿವೇಶನದಲ್ಲಿ ಭಾಗವಹಿಸಿ ನೇಮಕಾತಿ ಪ್ರಕ್ರಿಯೆಯಲ್ಲಿನ ವಿಳಂಬ, ಖಾಲಿ ಹುದ್ದೆಗಳ ಹೆಚ್ಚಳ ಹಾಗೂ ಪರೀಕ್ಷಾ ವ್ಯವಸ್ಥೆಯಲ್ಲಿನ ಅಸಮರ್ಪಕತೆ ಕುರಿತು ಚರ್ಚೆ ನಡೆಸಿದರು. ಬಳಿಕ ಅಧಿವೇಶನದಲ್ಲಿ ಕೈಗೊಂಡ ನಿರ್ಣಯಗಳನ್ನು ಒಳಗೊಂಡ ಮನವಿಪತ್ರವನ್ನು ತಹಶೀಲ್ದಾರರಾದ ಶ್ರೀಮತಿ ಕೀರ್ತಿ ಚಾಲಕ್ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಸಲ್ಲಿಸಿದರು. ಅಧಿವೇಶನದ ಅಧ್ಯಕ್ಷತೆಯನ್ನು ನ್ಯಾಯವಾದಿ ಪಿ.ಬಿ. ಮಾತಿನ ವಹಿಸಿದ್ದರು. ಈ ವೇಳೆ ಮಾತನಾಡಿದ ಮುಖಂಡರಾದ ಪಿ.ಬಿ. ಗೌಡರ ಮತ್ತು ಯಲ್ಲಪ್ಪ ಹೆಗಡೆ, ರಾಜ್ಯದ ವಿವಿಧ ಇಲಾಖೆಗಳಲ್ಲಿರುವ ಸುಮಾರು 2.84




ಲಕ್ಷ ಸರ್ಕಾರಿ ಹುದ್ದೆಗಳು ಹಾಗೂ ಕೇಂದ್ರ ಸರ್ಕಾರದ ಇಲಾಖೆಗಳಲ್ಲಿರುವ ಸುಮಾರು 9.64 ಲಕ್ಷ ಹುದ್ದೆಗಳು ದೀರ್ಘಕಾಲದಿಂದ ಖಾಲಿಯೇ ಉಳಿದಿರುವುದು ಆತಂಕಕಾರಿ ಸಂಗತಿ ಎಂದು ಹೇಳಿದರು.

ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವ ದೃಷ್ಟಿಯಿಂದ ಈ ಹುದ್ದೆಗಳನ್ನು ಇನ್ನಷ್ಟು ವಿಳಂಬ ಮಾಡದೆ ತಕ್ಷಣವೇ ಭರ್ತಿ ಮಾಡಬೇಕು ಎಂದು ಅವರು ಒತ್ತಾಯಿಸಿದರು. ಕೆಪಿಎಸ್ಸಿ, ಕೆಇಎ, ಕೆಎಸ್‌ಪಿ ಹಾಗೂ ಶಿಕ್ಷಣ ಇಲಾಖೆ ಸೇರಿದಂತೆ ನೇಮಕಾತಿ ನಡೆಸುವ ಎಲ್ಲಾ ಪ್ರಾಧಿಕಾರಗಳು ಪ್ರತಿವರ್ಷ ಖಾಲಿ ಹುದ್ದೆಗಳ ವಿವರ ಮತ್ತು ಪರೀಕ್ಷಾ ದಿನಾಂಕಗಳನ್ನು ಒಳಗೊಂಡ ವಾರ್ಷಿಕ ವೇಳಾಪಟ್ಟಿಯನ್ನು ಪ್ರಕಟಿಸಿ ನಿಗದಿತ ವೇಳೆಯಂತೆ ನೇಮಕಾತಿ ಪ್ರಕ್ರಿಯೆ ನಡೆಸಬೇಕು ಎಂದು ಆಗ್ರಹಿಸಲಾಯಿತು. ಕೇಂದ್ರ ಮಟ್ಟದ ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕನ್ನಡ ಭಾಷೆಯಲ್ಲಿಯೂ ನಡೆಸುವಂತೆ ಕ್ರಮ ಕೈಗೊಳ್ಳಬೇಕು.

ಪರೀಕ್ಷಾ ಅಕ್ರಮಗಳಿಗೆ ಕಟ್ಟುನಿಟ್ಟಿನ ಕಡಿವಾಣ ಹಾಕಿ ನೇಮಕಾತಿ ಪ್ರಕ್ರಿಯೆಯಲ್ಲಿ ಸಂಪೂರ್ಣ ಪಾರದರ್ಶಕತೆ ಕಾಪಾಡಬೇಕು. ಜೊತೆಗೆ ಉದ್ಯೋಗಾಕಾಂಕ್ಷಿಗಳಿಗೆ ಹೊರೆಯಾಗುತ್ತಿರುವ ದುಬಾರಿ ಅರ್ಜಿ ಶುಲ್ಕವನ್ನು ರದ್ದುಪಡಿಸಬೇಕು ಎಂಬ ಬೇಡಿಕೆಯನ್ನೂ ಅಧಿವೇಶನದಲ್ಲಿ ಮುಂದಿಡಲಾಯಿತು. ರಾಜ್ಯದ ನೇಮಕಾತಿ ವ್ಯವಸ್ಥೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ರೂಪಿಸಲು ಕೇಂದ್ರದ ಮಾದರಿಯಲ್ಲಿ ಕೆಪಿಎಸ್ಸಿಯನ್ನು ಸಮಗ್ರವಾಗಿ ಪುನರ್‌ರಚನೆ ಮಾಡಬೇಕು ಎಂಬ ಅಭಿಪ್ರಾಯವೂ ವ್ಯಕ್ತವಾಯಿತು. ಸಧ್ಯದ ಸರ್ಕಾರಗಳು ನೇಮಕಾತಿ ಪ್ರಕ್ರಿಯೆಯನ್ನು ವರ್ಷಗಟ್ಟಲೆ ಮುಂದೂಡುತ್ತಿರುವುದರಿಂದ ಸಾವಿರಾರು ಯುವಕರು ವಯೋಮಿತಿ ಮೀರುವ ಪರಿಸ್ಥಿತಿಯನ್ನು ಎದುರಿಸುತ್ತಿದ್ದಾರೆ.

ಪರೀಕ್ಷಾ ಅಕ್ರಮಗಳು ಉದ್ಯೋಗಾಕಾಂಕ್ಷಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡುತ್ತಿರುವುದು ದುಃಖಕರ ಸಂಗತಿ ಎಂದು ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು. ಸರ್ಕಾರ ತಕ್ಷಣವೇ ಯುವಕರ ಬೇಡಿಕೆಗಳತ್ತ ಗಮನಹರಿಸಿ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು. ಅಧಿವೇಶನದಲ್ಲಿ ಉದ್ಯೋಗಾಕಾಂಕ್ಷಿಗಳಾದ ಅನೀಲ ವಾಲಿಕಾರ, ಮುತ್ತಣ್ಣ ಒಡ್ಡೋಡಗಿ, ಮುತ್ತು ಕನ್ನೂರ, ಜುಮ್ಮಣ್ಣ ಹೊಕ್ರಾಣಿ, ಬಸವರಾಜ ಹುಲಗಣ್ಣಿ, ಸಿದ್ದು ವಾಲಿಕಾರ, ಸೀತಪ್ಪ ಗಣಿ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಯುವಕರು ಭಾಗವಹಿಸಿದ್ದರು.

# ವಿಶ್ವ ಗ್ರಾಹಕರ ದಿನಾಚರಣೆ 2026ರ ಕಾರ್ಯಕ್ರಮಕ್ಕೆ ಚಾಲನೆ

## ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕಾಳಜಿ ವಹಿಸಿ: ನ್ಯಾ.ಹೆಚ್.ಎ.ಸಾತ್ವಿಕ್

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಗ್ರಾಹಕರ ಹಕ್ಕುಗಳ ಚಲಾವಣೆ ಜೊತೆಗೆ ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಬೇಕು. ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕಾಳಜಿ ವಹಿಸಬೇಕೆಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಹೆಚ್.ಎ.ಸಾತ್ವಿಕ್ ಅವರು ಹೇಳಿದರು.**

ಮಾರ್ಚ್ 16ರ ಸೋಮವಾರ ದಂದು ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಗ್ರಾಹಕರ ದಿನಾಚರಣೆ 2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ಲಾಸ್ಟಿಕ್ ಬಳಕೆಯಲ್ಲಿ ರಾಯಚೂರಿನ ಸದರ್ ಬಜಾರ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೆಳಂಬೆಳಗೆ ಎಲ್ಲೆಂದರಲ್ಲಿ ರಾಶಿ ರಾಶಿಯ ಪ್ಲಾಸ್ಟಿಕ್ ನೋಡಬಹುದಾಗಿದೆ. ಇದನ್ನು ನಿಯಂತ್ರಿಸಲು ಕೇವಲ ಅಧಿಕಾರಿಗಳಿಂದ ಸಾಧ್ಯವಿಲ್ಲ. ಗ್ರಾಹಕರು ಸ್ವಯಂ ಪ್ರೇರಿತವಾಗಿ ಬಳಕೆಯನ್ನು ಕಡಿಮೆ ಮಾಡಬೇಕೆಂದರು.

ರಾಯಚೂರು ಜಿಲ್ಲೆದಂದ್ಯಾತ ಕೆಟ್ಟ



ಎಣ್ಣೆಯಲ್ಲಿ ಮಿರ್ಚಿ, ಗೋಬಿ ಮಂಚೂರಿ ಸೇರಿದಂತೆ ಇತರೆ ಆಹಾರ ಪದಾರ್ಥಗಳನ್ನು ತಯಾರಿಸುತ್ತಿದ್ದು, ಇದರಿಂದಾಗಿ ಗ್ರಾಹಕರ ಆರೋಗ್ಯ ಮೇಲೆ ಪ್ರಭಾವ ಬೀರುತ್ತದೆ. ವ್ಯಾಪಾರಸ್ಥರು ಗ್ರಾಹಕರ ಆರೋಗ್ಯ ಕಡೆ ಗಮನಹರಿಸಬೇಕು. ಕೇವಲ ಲಾಭದ ಕಡೆ ಗಮನಹರಿಸಬಾರದು ಎಂದರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಗೌರವಾನ್ವಿತ ಕೆ.ವಿ.ಸುರೇಂದ್ರ ಬಾಬು ಅವರು ಮಾತನಾಡಿ, ವ್ಯಾಪಾರಸ್ಥರು ವಸ್ತುಗಳಿಗೆ ನಿಗದಿತ ಬೆಲೆಗಿಂತ ಹೆಚ್ಚಿನ ದರ ಪಡೆಯುವಂತಿಲ್ಲ. ವಸ್ತುಗಳು ದೋಷದಿಂದ ಕೂಡಿದ್ದರೆ ಪ್ರಶ್ನೆ ಮಾಡುವ ಹಕ್ಕು ಗ್ರಾಹಕರಿಗಿದೆ. ಅವಧಿ ಮೀರಿದ ಉತ್ಪನ್ನಗಳನ್ನು ನೀಡಿದರೆ ಅಂತಹವರ ಮೇಲೆ ಗ್ರಾಹಕರ ಆಯೋಗದಲ್ಲಿ ಪ್ರಕರಣ ದಾಖಲಿಸಿ ಪರಿಹಾರ ಪಡೆಯಬಹುದು.

ಜಿಲ್ಲಾ ಗ್ರಾಹಕರ ವ್ಯಾಜ್ಯ ಪರಿಹಾರ ಆಯೋಗ ಹಾಗೂ ರಾಜ್ಯ ಆಯೋಗದಲ್ಲಿ ಇತ್ತಿಷ್ಟು ಪರಿಹಾರ ಪಡೆಯಬಹುದಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಗ್ರಾಹಕರ ಹಕ್ಕುಗಳನ್ನು ಅರಿಯಬೇಕು ಎಂದರು. ಇಂದಿನ ದಿನಗಳಲ್ಲಿ ಸಾಕಷ್ಟು ಜನರು ವ್ಯಾಪಾರಕ್ಕಾಗಿ ಆನ್‌ಲೈನ್ ಮೊರೆ ಹೋಗುತ್ತಿರುವುದನ್ನು ಕಾಣಬಹುದು. ಅಂಗಡಿಗಳಿಂದ ವಸ್ತುಗಳನ್ನು ಕೊಳ್ಳುವುದಷ್ಟೇ ಅಲ್ಲ. ಬ್ಯಾಂಕಿಂಗ್ ಹಾಗೂ ವಿಮಾ ಸೌಲಭ್ಯಗಳನ್ನು ಪಡೆಯುವಲ್ಲಿ ಮೋಸ ಹೋಗದಂತೆ ಎಚ್ಚರ ವಹಿಸುವ ನಿಟ್ಟಿನಲ್ಲಿ ಈ ಬಾರಿಯ ವಿಶ್ವ ಗ್ರಾಹಕರ ದಿನವನ್ನು ಸುರಕ್ಷಿತ ಉತ್ಪನ್ನಗಳು ಆತ್ಮವಿಶ್ವಸದ ಗ್ರಾಹಕರು' ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ ಎಂದರು. ಈ ವೇಳೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಗೌರವಾನ್ವಿತ ಪ್ರಭುದೇವ್ ಪಾಟೀಲ್ ಅವರು ಮಾತನಾಡಿ, ದೈನಂದಿನ ಜೀವನದಲ್ಲಿ ಪ್ರತಿಯೊಬ್ಬರೂ ಗ್ರಾಹಕರೇ. ಗ್ರಾಹಕರಿಗೆ ನ್ಯಾಯಯುತ, ಯೋಗ್ಯ ಹಾಗೂ ಗುಣಮಟ್ಟದ ಸರಕು ಮತ್ತು ಸೇವೆಗಳನ್ನು ನೀಡುವ ಜವಾಬ್ದಾರಿ ವ್ಯಾಪಾರಸ್ಥರದ್ದು. ಯಾವುದೇ ವಸ್ತುಗಳನ್ನು ಕೊಡುವವನ ತೃಪ್ತಿಗಾಗಿ ಕೊಳ್ಳುವುದಲ್ಲ, ಅಲ್ಲಿ ಗ್ರಾಹಕರ ಸಂತೃಪ್ತಿಯೇ ಮುಖ್ಯ. ಸುರಕ್ಷತೆ, ಆಯ್ಕೆ ಹಾಗೂ ಆರೋಗ್ಯಪೂರ್ಣ ಪರಿಸರ ಹೊಂದುವ ಹಕ್ಕನ್ನು ಕಾಯ್ದೆಯು ಎಲ್ಲ ಗ್ರಾಹಕರಿಗೂ ನೀಡಿದೆ ಎಂದರು.

ಅಡುಗೆ ಅನಿಲದ ಕೊರತೆ ಇಲ್ಲ: ಜಿಲ್ಲೆಯಲ್ಲಿ ಅಡುಗೆ ಅನಿಲದ ದಾಸ್ತಾನು ಹೇರಳವಾಗಿದ್ದು, ಸಾರ್ವಜನಿಕರು ಯಾವುದೇ ರೀತಿಯ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ. ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕರು ಆತಂಕದಿಂದ ಅತಿಯಾಗಿ ಗ್ಯಾಸ್ ಬುಕಿಂಗ್ ಮಾಡುತ್ತಿರುವುದು ಕಂಡುಬಂದಿದೆ. ಇದರಿಂದಾಗಿ ವ್ಯವಸ್ಥೆ ಮೇಲೆ ಒತ್ತಡ ಉಂಟಾಗುತ್ತದೆ. ಜಿಲ್ಲೆಯಲ್ಲಿ ಇದಕೂ ಮುಂಚೆ ಪ್ರತಿ ತಿಂಗಳು 6-7 ಸಾವಿರ ಬುಕಿಂಗ್ ಆಗುತ್ತಿದ್ದು, ಪ್ರಸ್ತುತ 10-12 ಸಾವಿರಕ್ಕೂ ಹೆಚ್ಚಿನ ಮಟ್ಟದಲ್ಲಿ ಬುಕ್ಕಿಂಗ್ ಆಗುತ್ತಿವೆ. ಎಲ್ಲರಿಗೂ ಎಲ್‌ಪಿಜಿ ದೊರೆಯುತ್ತದೆ.

ಯಾರು ಆತಂಕಕ್ಕೆ ಒಳಗಬಾರದೆಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್ ಅವರು ಹೇಳಿದರು. ಸಾರ್ವಜನಿಕರಿಗೆ ಜಾಗೃತಿ: ಕರ್ನಾಟಕ ಆಹಾರ ನಾಗರಿಕ ಮತ್ತು ಸರಬರಾಜು ನಿಗಮ ನಿಯಮಿತದಿಂದ ಸಾರ್ವಜನಿಕ ವಿತರಣೆಯಡಿ ವಿತರಿಸಲಾದ ಸಾರವರ್ಧಿತ ಅಕ್ಕಿಯ ಕುರಿತು, ಕಾನೂನು ಮಾಪನ ಶಾಸ್ತ್ರ ಇಲಾಖೆಯಿಂದ ತೂಕ ಮತ್ತು ಅಳತೆ ಹಾಗೂ ಮೆ: ಸುಮಂತ್ ಫ್ಲಾಮೋಜನ್ ಇಂಡೇನ್ ಗ್ಯಾಸ್ ಏಜೆನ್ಸಿಯಿಂದ ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿಯ ಎಲ್.ಪಿ.ಜಿ ಸುರಕ್ಷತೆ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು. ಈ ವೇಳೆ ವಕೀಲರಾದ ತಿಮ್ಮಪ್ಪ ಹಾಗೂ ಕುಮಾರಿ ಮೋನಿಷಾ ಅವರಿಂದ ವಿಶ್ವ ಗ್ರಾಹಕರ ದಿನಾಚರಣೆ 2026ರ ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸನ ನೀಡಿದರು.

ಸಂದರ್ಭದಲ್ಲಿ ಜಿಲ್ಲಾ ನ್ಯಾಯವಾದಿಗಳ ಸಂಘದ ಉಪಾಧ್ಯಕ್ಷರಾದ ನಜೀರ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟ್ರಾರ್ ಮತ್ತು ಸಹಾಯಕ ಆಡಳಿತಾಧಿಕಾರಿಗಳಾದ ಚಂದ್ರಕಾಂತ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ಅಮೃತಾ ಪಿ.ಚವ್ಹಾಣ, ಕರ್ನಾಟಕ ಆಹಾರ ನಾಗರಿಕ ಮತ್ತು ಸರಬರಾಜು ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರಾದ ಪ್ರಕಾಶ್, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ವ್ಯವಸ್ಥಾಪಕರಾದ ಶ್ರೀ ಹರೀಶ್, ಪ್ರಥಮ ದರ್ಜೆ ಸಹಾಯಕರಾದ ಜಿ.ಹರೀಶ್ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಇದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.